ಸಂಪುಟ : 11 ಸಂಚಿಕೆ: 90 ಪುಟ : 4+2 ಬೆಲೆ: 3.00 ಶನಿವಾರ ಮೇ 09 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 90 Pages : 4+2 Price : 3.00 Saturday May 9 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವೈದ್ಯಕೀಯ ತುರ್ತು ಚಿಕಿತ್ಸೆಗೆ ಬಿಪಿಎಲ್ ಹೊಸ ಪಡಿತರ ಚೀಟಿಗೆ ಅರ್ಜಿ ಆಹ್ವಾನ



■ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ತುರ್ತು ಚಿಕಿತ್ಸೆಯ ನೆರವಿಗಾಗಿ ಬಿಪಿಎಲ್ ಹೊಸ ಪಡಿತರ ಚೀಟಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಗದಗ ತಾಲೂಕ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅರ್ಜಿ ಸಲ್ಲಿಸಲು 2027ರ ಮಾರ್ಚ್ 31ರವರೆಗೆ ಕಾಲಾವಕಾಶ ನೀಡಲಾಗಿದ್ದು, ಅರ್ಹ ಫಲಾನುಭವಿಗಳು ಹತ್ತಿರದ ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಿಗೆ ಭೇಟಿ ನೀಡಿ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

ವೈದ್ಯಕೀಯ ತುರ್ತು ಚಿಕಿತ್ಸೆಗೆ ಬಿಪಿಎಲ್ ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಬಯಸುವ ಅರ್ಹ ಫಲಾನುಭವಿಗಳು ಎಲ್ಲ ಸದಸ್ಯರ ಆಧಾರ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು ಎಂದು ಹೇಳಿದ್ದಾರೆ. 6 ವರ್ಷದೊಳಗಿನ ಮಕ್ಕಳಿದ್ದಲ್ಲಿ ಅವರ ಜನನ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಒದಗಿಸಬೇಕು. ಜೊತೆಗೆ ಕುಟುಂಬದ ಎಲ್ಲಾ ಸದಸ್ಯರು ಹೆಬ್ಬೆರಳಿನ ಗುರುತು (ಥಂಬ್) ನೀಡುವುದು ಅಗತ್ಯವಾಗಿದೆ ಎಂದು ಗದಗ ತಾಲೂಕ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸರ್ಕಾರ ನೀಡಿರುವ ಈ ಸೌಲಭ್ಯವನ್ನು ಅರ್ಹ ಫಲಾನುಭವಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದ್ದಾರೆ.

## ಕಡಲೆಕಾಳು ಖರೀದಿಗೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳು ಖರೀದಿ ಪ್ರಕ್ರಿಯೆ ಗದಗ ಜಿಲ್ಲೆಯಲ್ಲಿ ಮುಂದುವರಿದಿದೆ. ರೈತರಿಂದ ಕಡಲೆಕಾಳು ಖರೀದಿಸಲು ಜಿಲ್ಲೆಯ ವಿವಿಧ ಖರೀದಿ ಕೇಂದ್ರಗಳಲ್ಲಿ ನೋಂದಣಿ ಹಾಗೂ ಖರೀದಿ ಕಾರ್ಯ ಪ್ರಗತಿಯಲ್ಲಿದ್ದು, 2025-26ನೇ ಸಾಲಿನ ಮುಂಗಾರು ಹಂಗಾಮಿನ ಕಡಲೆಕಾಳು ಉತ್ಪನ್ನ ಖರೀದಿಗೆ ನಿಗದಿಪಡಿಸಿದ್ದ ಅವಧಿಯನ್ನು ಇದೀಗ ಮೇ 28ರವರೆಗೆ ವಿಸ್ತರಿಸಲಾಗಿದೆ. ನೋಂದಾಯಿತ ರೈತರಿಂದ ಮಾತ್ರ ಕಡಲೆಕಾಳು ಖರೀದಿಸಲು ಆದೇಶಿಸಲಾಗಿದ್ದು, ಈ ಕುರಿತು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರು ಹಾಗೂ ಗದಗ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೈತರ ಒಪ್ಪಿಗೆ ಇಲ್ಲದೆ ಭೂ ಗುರುತು ಪ್ರಕ್ರಿಯೆ ಆರೋಪ- ಜಿಲ್ಲಾಧಿಕಾರಿಗೆ ಕರವೇ-ರೈತ ಸಂಘ ಮನವಿ


# ಫಲವತ್ತಾದ ಭೂಮಿಗೆ ವಿಂಡ್‌ಪ್ಯಾನ್ ಕಂಟಕ?

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗದಗ ತಾಲೂಕಿನ ನಾಗಸಮುದ್ರ, ನರಸಾಪೂರ, ಚಿಕ್ಕೊಪ್ಪ ಹಾಗೂ ಹಿರೇಕೊಪ್ಪ ಗ್ರಾಮಗಳ ಸರಹದ್ದಿನಲ್ಲಿ ರೈತರ ತೀವ್ರ ವಿರೋಧದ ನಡುವೆಯೇ ಕೆಲವು ವಿಂಡ್‌ಪ್ಯಾನ್ (ಪವನ ವಿದ್ಯುತ್) ಕಂಪನಿಗಳು ತಮ್ಮ ಏಜೆಂಟರ ಮೂಲಕ ಕಂಬ ಅಳವಡಿಕೆಗೆ ಮುಂದಾಗಿರುವುದನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್. ಶಿವರಾಮೇಗೌಡ್ರ ಬಣ), ಕರ್ನಾಟಕ ರೈತ ಸಂಘ-ಹಸಿರು ಸೇನೆ ಹಾಗೂ ರೈತರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

**"ಕ್ರಮ ಕೈಗೊಳ್ಳದಿದ್ದರೆ ಹೋರಾಟದ ಎಚ್ಚರಿಕೆ"**

ಜಿಲ್ಲಾಡಳಿತ, ಸಚಿವರು ಹಾಗೂ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ವಿಂಡ್‌ಪ್ಯಾನ್ ಅಳವಡಿಕೆ ಪ್ರಕ್ರಿಯೆ ರದ್ದುಪಡಿಸಬೇಕು. ಇಲ್ಲವಾದರೆ ಕರ್ನಾಟಕ ರಕ್ಷಣಾ ವೇದಿಕೆ, ರೈತ ಸಂಘ-ಹಸಿರು ಸೇನೆ, ದಲಿತ ಹಾಗೂ ವಿದ್ಯಾರ್ಥಿ ಸಂಘಟನೆಗಳೊಂದಿಗೆ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಮುಖಂಡರು ಎಚ್ಚರಿಕೆ ನೀಡಿದರು.



ಈ ವೇಳೆ ಮಾತನಾಡಿದ ಕರವೇ (ಹೆಚ್. ಶಿವರಾಮೇಗೌಡ್ರ ಬಣ) ಗದಗ ಜಿಲ್ಲಾಧ್ಯಕ್ಷ ಹಾಗೂ ನೀರಲಗಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಎಂ.ಪಿ. ಪರ್ವತಗೌಡ್ರ, "ರೈತರ ಒಪ್ಪಿಗೆ ಪಡೆಯದೇ, ಅವರ ಹೆಸರಿನ ಜಮೀನು ಪಟ್ಟಿಗಳನ್ನು ತಾವೇ ಸಿದ್ಧಪಡಿಸಿ ವಿಂಡ್‌ಪ್ಯಾನ್ ಅಳವಡಿಸಲು ಮುಂದಾಗಿರುವ ಕಂಪನಿಗಳ ವಿರುದ್ಧ ಕಾನೂನು ಹೋರಾಟ ನಡೆಸಲಾಗುವುದು" ಎಂದು ಎಚ್ಚರಿಕೆ ನೀಡಿದರು.

ಸರ್ಕಾರದ ನಿಯಮಗಳು ಹಾಗೂ ಸಂವಿಧಾನಬದ್ಧ ನೀತಿ-ನಿಯಮಗಳನ್ನು ಗಾಳಿಗೆ ತೂರಿ ಕಂಪನಿಗಳು ರೈತರ ಭೂಮಿಯ ಮೇಲೆ ದೌರ್ಜನ್ಯ ನಡೆಸುತ್ತಿವೆ. ರೈತರ ವಿರೋಧದ ನಡುವೆಯೇ ಪವನ ವಿದ್ಯುತ್ ಕಂಬ ಅಳವಡಿಕೆಗೆ ಹುನ್ನಾರ ನಡೆಯುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

**"ಫಲವತ್ತಾದ ಭೂಮಿಯನ್ನೇ ಕಬಳಿಕೆ"**

ಕರವೇ ಹಿರಿಯ ಮುಖಂಡ ಹಾಗೂ ಪ್ರಗತಿಪರ ರೈತ ಯಮನೂರಸಾಬ್ ನದಾಫ್ ಮಾತನಾಡಿ, ನರಸಾಪೂರ-ಚಿಕ್ಕೊಪ್ಪ ಭಾಗದಲ್ಲಿ ಒಳಚರಂಡಿ ಶುದ್ಧೀಕರಣ ಘಟಕದ ಹೆಸರಿನಲ್ಲಿ 198 ಎಕರೆ ಫಲವತ್ತಾದ ಭೂಮಿಯನ್ನು ಸರ್ಕಾರ ವಶಪಡಿಸಿಕೊಂಡಿದೆ. ನಾಗಸಮುದ್ರ-ನರಸಾಪೂರ ಮಧ್ಯೆ 200ಕ್ಕೂ ಹೆಚ್ಚು ಎಕರೆ ಭೂಮಿಯನ್ನು ಕೈಗಾರಿಕಾ ಪ್ರದೇಶವನ್ನಾಗಿ ಮಾಡಲಾಗಿದೆ ಎಂದು ಆರೋಪಿಸಿದರು.

ಇದಕ್ಕೆ ಹೊಂದಿಕೊಂಡ ಮತ್ತಷ್ಟು 250 ಎಕರೆ ಭೂಮಿಯನ್ನು ಕೈಗಾರಿಕಾ ಪ್ರದೇಶವನ್ನಾಗಿ ಪರಿವರ್ತಿಸಲು ಕೆಐಎಡಿಬಿ ಈಗಾಗಲೇ ನಿರ್ಬಂಧ ಹೇರಿರುವುದು ಸರ್ಕಾರದ ಉದ್ದೇಶಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

▶▶3ನೇ ಪುಟಕ್ಕೆ

**ಪ್ರಮುಖ ಆರೋಪಗಳು**

- ರೈತರ ಒಪ್ಪಿಗೆ ಇಲ್ಲದೆ ಭೂ ಗುರುತು ಪ್ರಕ್ರಿಯೆ ಫಲವತ್ತಾದ ಭೂಮಿಯ ಮೇಲೆಯೇ
- ಡ್‌ಪ್ಯಾನ್ ಯೋಜನೆ ವನ್ಯಜೀವಿ ಹಾಗೂ ಪರಿಸರಕ್ಕೆ ಅಪಾಯ
- ಸರ್ಕಾರದ ನಿಯಮ ಉಲ್ಲಂಘನೆ ಆರೋಪ
- ಕಂಪನಿಗಳ ವಿರುದ್ಧ ಕಾನೂನು ಹೋರಾಟದ ಎಚ್ಚರಿಕೆ

### ಪಟ್ಟಣದಾದ್ಯಂತ ಬಿಡಾಡಿ ದನ, ನಾಯಿ ಹಂದಿಗಳ ಕಾಟ- ಸಾರ್ವಜನಿಕರಲ್ಲಿ ಆತಂಕ!

# ಬಿಡಾಡಿ ದನಗಳ ಹಾವಳಿಗೆ ಬೆಚ್ಚಿದ ಹಗರಿಬೊಮ್ಮನಹಳ್ಳಿ!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದಲ್ಲಿ ಹಲವು ವರ್ಷಗಳಿಂದ ಬಿಡಾಡಿ ದನಗಳ ಹಾವಳಿ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಪ್ರಮುಖ ರಸ್ತೆಗಳಿಂದ ಹಿಡಿದು ಮಾರುಕಟ್ಟೆ ಪ್ರದೇಶ, ಆಸ್ಪತ್ರೆ, ಶಾಲೆಗಳವರೆಗೆ ಎಲ್ಲೆಂದರಲ್ಲಿ ಬಿಡಾಡಿ ದನಗಳು ಸಂಚರಿಸುತ್ತಿರುವುದರಿಂದ ಅಪಘಾತ ಭೀತಿ ದಿನೇ ದಿನೇ ಹೆಚ್ಚುತ್ತಿದೆ.

ಪಟ್ಟಣದ ಬಸವೇಶ್ವರ ಬಜಾರ್, ಕೂಡ್ಲಿಗಿ ಸರ್ಕಲ್, ಸಾರ್ವಜನಿಕ ಆಸ್ಪತ್ರೆ, ಸಾರ್ವಜನಿಕ ಗ್ರಂಥಾಲಯ ಸೇರಿದಂತೆ ಹಲವು ಪ್ರಮುಖ ಪ್ರದೇಶಗಳಲ್ಲಿ ಆಕಳು, ಕರುಗಳು ಗುಂಪು ಗುಂಪಾಗಿ ಓಡಾಡುತ್ತಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟುಮಾಡುತ್ತಿವೆ.

ಕಾರು, ಬಸ್, ಲಾರಿ, ಬೈಕ್ ಹಾಗೂ ಸೈಕಲ್‌ಗಳಿಗೆ ಅಡ್ಡಬಂದು ಅಪಘಾತಗಳಿಗೆ ಕಾರಣವಾಗುತ್ತಿರುವುದರಿಂದ ಹಲವರು ಗಾಯಗೊಂಡಿದ್ದಾರೆ. ಅನೇಕರು ಕೈಕಾಲು ಮುರಿದುಕೊಂಡ ಘಟನೆಗಳೂ ನಡೆದಿವೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

▶▶2ನೇ ಪುಟಕ್ಕೆ





"ಪಟ್ಟಣದಲ್ಲಿ ಬಿಡಾಡಿ ದನಗಳ ಹಾವಳಿ ಹೆಚ್ಚಾಗಿರುವುದು ನಿಜ. ಜನರಿಗೆ ತೊಂದರೆ ಮುಂದುವರಿದರೆ ಅವುಗಳನ್ನು ಕಾರ್ಮಿಕರ ಮೂಲಕ ಗೋಶಾಲೆಗೆ ಸಾಗಿಸಲಾಗುವುದು. ಸತ್ತ ನಾಯಿ, ಹಂದಿಗಳನ್ನು ಎಲ್ಲೆಂದರಲ್ಲಿ ಎಸೆಯದೇ ಪುರಸಭೆಗೆ ಮಾಹಿತಿ ನೀಡಿದರೆ ಸಿಬ್ಬಂದಿಯಿಂದ ದಫನ್ ಮಾಡುವ ವ್ಯವಸ್ಥೆ ಮಾಡಲಾಗುವುದು."

**– ರೇಷ್ಮಾ ಸಿಕಂದರ್,** ಅಧ್ಯಕ್ಷರು, ಪುರಸಭೆ ಹಗರಿಬೊಮ್ಮನಹಳ್ಳಿ

"ಪಟ್ಟಣದಲ್ಲಿ ಎಲ್ಲೆಂದರಲ್ಲಿ ಬಿಡಾಡಿ ದನಗಳು ಕಂಡು ಬಂದರೆ ಮೊದಲು ಮಾಲೀಕರಿಗೆ ಏಳು ದಿನಗಳ ನೋಟಿಸ್ ನೀಡಲಾಗುವುದು. ಜಾಹೀರಾತು ಮೂಲಕ ಎಚ್ಚರಿಕೆ ನೀಡಿದ ಬಳಿಕವೂ ಸ್ಪಂದಿಸದಿದ್ದರೆ ದನಗಳನ್ನು ಗೋಶಾಲೆಗೆ ಸಾಗಿಸಲು ಕ್ರಮ ಕೈಗೊಳ್ಳಲಾಗುವುದು."

**– ಎಂ.ಕೆ. ಮುಗಳಿ,** ಮುಖ್ಯಾಧಿಕಾರಿಗಳು, ಪುರಸಭೆ ಹಗರಿಬೊಮ್ಮನಹಳ್ಳಿ

"ನಮ್ಮ ವಾರ್ಡ್‌ನಲ್ಲೇ ಒಬ್ಬ ವಯಸ್ಕ ಹಾಗೂ ಒಬ್ಬ ಬಾಲಕ ಬಿಡಾಡಿ ದನಗಳಿಂದ ಗಾಯಗೊಂಡಿದ್ದಾರೆ. ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಕರೆ ಮಾಡಿದರೂ 'ನಮಗೆ ಸಂಬಂಧವಿಲ್ಲ' ಎಂದು ಉತ್ತರ ನೀಡಿದರು. ಜಿಲ್ಲಾಧಿಕಾರಿಗಳಿಗೆ ಕರೆ ಮಾಡಿದರೂ ಸ್ಪಂದನೆ ಸಿಗಲಿಲ್ಲ. ಶೀಘ್ರದಲ್ಲೇ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು."

– ಪವಾಡಿ ಹನುಮಂತಪ್ಪ, ಜಿಲ್ಲಾ ಯೋಜನಾ ಸಮಿತಿ ಸದಸ್ಯರು ಹಾಗೂ ಪುರಸಭೆ ಸದಸ್ಯರು

### ತಿಂಗಳಿಗೊಮ್ಮೆ ನೀರು ಪೂರೈಕೆ ಆರೋಪ: ಸಾರ್ವಜನಿಕರ ಆಕ್ರೋಶ

# ನೀರಿಗಾಗಿ ಪುರಸಭೆಗೆ ದೌಡಾಯಿಸಿದ ವಾರ್ಡ್ ನಿವಾಸಿಗಳು!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಪಟ್ಟಣದ ವಾರ್ಡ್ ನಂ. 4 ಮತ್ತು 5ರ ನಿವಾಸಿಗಳು ಶುಕ್ರವಾರ ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಆಗ್ರಹಿಸಿ ಪುರಸಭೆಗೆ ದೌಡಾಯಿಸಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರನ್ನು ಭೇಟಿಯಾದ ನಿವಾಸಿಗಳು, ತಮ್ಮ ವಾರ್ಡ್‌ಗಳಲ್ಲಿ ಉಂಟಾಗಿರುವ ನೀರಿನ ಸಮಸ್ಯೆಯನ್ನು ವಿವರಿಸಿದರು.

ತಿಂಗಳಿಗೊಮ್ಮೆ ಮಾತ್ರ ಕುಡಿಯುವ ನೀರು ಪೂರೈಕೆಯಾಗುತ್ತಿದ್ದು, ವಾರ್ಡ್‌ನ ಕೆಲವೆಡೆ ಅಳವಡಿಸಿರುವ ಸಾರ್ವಜನಿಕ ಕೊಳವೆ ನೀರು ಪೂರೈಕೆಯೂ ಕಳೆದ ಎರಡು ತಿಂಗಳಿಂದ ಸ್ಥಗಿತಗೊಂಡಿದೆ. ಇದರಿಂದ ಕುಡಿಯುವ ನೀರಿಗಾಗಿ ನಿತ್ಯ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ನೀರು ಸರಬರಾಜು ಸಿಬ್ಬಂದಿಯನ್ನು ಪ್ರಶ್ನಿಸಿದರೆ, ಸಾರ್ವಜನಿಕ ನೀರಿನ ಬೋರ್‌ವೆಲ್ ದುರಸ್ತಿಯಲ್ಲಿದೆ, ನದಿ ನೀರಿನ ಪೂರೈಕೆಯಲ್ಲಿ ವಿದ್ಯುತ್ ಸಮಸ್ಯೆ ಹಾಗೂ ಪೈಪ್‌ಲೈನ್ ದುರಸ್ತಿ ಕಾಮಗಾರಿ ನಡೆಯುತ್ತಿದೆ ಎಂಬ ಕಾರಣಗಳನ್ನು ನೀಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಾರ್ಡ್‌ನ ಬಹುತೇಕ ನಿವಾಸಿಗಳು ಬಡವರು, ಕೂಲಿಕಾರರು ಹಾಗೂ ಬೀದಿಬದಿ ವ್ಯಾಪಾರಸ್ಥರಾಗಿದ್ದು, ಹಣ ನೀಡಿ ಟ್ಯಾಂಕರ್ ನೀರು ತರಿಸಿಕೊಳ್ಳುವ ಸ್ಥಿತಿಯಲ್ಲಿಲ್ಲ. ದಯವಿಟ್ಟು ಸಮರ್ಪಕ ನೀರು ಪೂರೈಕೆ ಮಾಡಿ ಎಂದು ಮುಖ್ಯಾಧಿಕಾರಿಗಳಿಗೆ ಮನವಿ ಮಾಡಿದರು. ಈ ವೇಳೆ ಪ್ರತಿಕ್ರಿಯಿಸಿದ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ನೀರು ಪೂರೈಕೆಯಲ್ಲಿ ಉಂಟಾಗಿರುವ ಸಮಸ್ಯೆಯನ್ನು ತಕ್ಷಣ ಬಗೆಹರಿಸಿ, ಮುಂದಿನ ದಿನಗಳಲ್ಲಿ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಸೀಮ ಖವಾಸ್, ಮುಕ್ತಿಯಾರಮ್ಮದ ಸಿದ್ದಿ, ಹಜರೇಸಾಬ ಸೂರಣಗಿ, ಜೈಲಾನಿ ಚೌರಿ, ಇಬ್ರಾಹಿಂ ರೋಶನಖಾನವರ, ಅಬ್ದುಲ್ ಸಿದ್ದಿ, ದುದ್ದು ಹುಲಗೂರ, ಮುಜಮಿಲ್ ಬಾರಿಗಿಡದ, ಹಜರತಲಿ ಸೂರಣಗಿ, ಐ.ಡಿ. ಕಡಕೋಳ, ಹುಸೇನಸಾಬ ಮುಳಗುಂದ ಸೇರಿದಂತೆ ಮಹಿಳೆಯರು ಹಾಗೂ ಯುವಕರು ಉಪಸ್ಥಿತರಿದ್ದರು.

### ಸ್ಥಳ ಪರಿಶೀಲನೆ ವೇಳೆ ಅಧಿಕಾರಿಗಳಿಗೆ ಸಹಕರಿಸಲು ರವಿಕಾಂತ ಅಂಗಡಿ ಕರೆ

# ಅರಣ್ಯ ಸಾಗುವಳಿ ರೈತರಿಗೆ ಹಕ್ಕುಪತ್ರದ ಭರವಸೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಬಗರಹುಕುಂ ಹಾಗೂ ಅರಣ್ಯ ಭೂಮಿ ಸಾಗುವಳಿ ಮಾಡುವ ಪ್ರತಿಯೊಬ್ಬ ಫಲಾನುಭವಿಯೂ ಸರ್ಕಾರದ ನಿಯಮಾನುಸಾರ ಅಗತ್ಯ ದಾಖಲೆಗಳನ್ನು ಸಮರ್ಪಕವಾಗಿ ಒದಗಿಸಬೇಕು. ಅಧಿಕಾರಿಗಳ ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಯಾವುದೇ ಗೊಂದಲ ಸೃಷ್ಟಿಸಿಕೊಳ್ಳದೇ ಸಹಕರಿಸಬೇಕು ಎಂದು ಉತ್ತರ ಕರ್ನಾಟಕ ಮಹಾಸಭಾ ರಾಜ್ಯ ಘಟಕದ ಅಧ್ಯಕ್ಷ ರವಿಕಾಂತ ಅಂಗಡಿ ಹೇಳಿದರು.

ಪಟ್ಟಣದ ತಹಸೀಲ್ದಾರ್ ಸಭಾಭವನದಲ್ಲಿ ಗುರುವಾರ ಆಯೋಜಿಸಿದ್ದ ಬಗರಹುಕುಂ ಹಾಗೂ ಅರಣ್ಯ ಭೂಮಿ ಅವಲಂಬಿತ ರೈತರಿಗೆ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸುವ ಕಾರ್ಯ ಭರದಿಂದ ಸಾಗುತ್ತಿದೆ. ಸರ್ಕಾರವೂ ಅರ್ಹ ರೈತರಿಗೆ ಶೀಘ್ರ ಹಕ್ಕುಪತ್ರ ವಿತರಿಸಲು ನಿರ್ದೇಶನ ನೀಡಿರುವುದರಿಂದ ದಶಕಗಳ ರೈತರ ಕನಸು ನನಸಾಗುವ ದಿನ ದೂರವಿಲ್ಲ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ ರೂಪಾಲಿ ನಾಯಕ ಮಾತನಾಡಿ, ದಾಖಲೆಗಳ ವಿಷಯದಲ್ಲಿ ರೈತರಿಗೆ ಕೆಲ ತಾಂತ್ರಿಕ ತೊಂದರೆಗಳಿದ್ದು, ಅವುಗಳನ್ನು ಕೂಲಂಕಷವಾಗಿ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು ಎಂದರು.

ದಾಖಲೆಗಳ ಕ್ರೋಡೀಕರಣ ಸರಿಯಾಗಿ ನಡೆಯಬೇಕು. ಸಮಸ್ಯೆಗಳಿದ್ದಲ್ಲಿ ರೈತರಿಗೆ ಸಮರ್ಪಕ ಮಾಹಿತಿ ನೀಡಿ ಸಕಾರಾತ್ಮಕವಾಗಿ ಸ್ಪಂದಿಸಬೇಕು. ಮುಖ್ಯವಾಗಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಪಂಚಾಯತ್ ಕಾರ್ಯದರ್ಶಿಗಳು ಸರ್ಕಾರದ ನಿಯಮಗಳನ್ನು ಸರಿಯಾಗಿ ತಿಳಿದುಕೊಂಡಿರಬೇಕು ಎಂದು ಸಲಹೆ ನೀಡಿದರು.

ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕೈಪಿಡಿಗಳನ್ನು ಅಧ್ಯಯನ ಮಾಡಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ದಶಕಗಳ ರೈತರ ಕನಸನ್ನು ನನಸು ಮಾಡುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಮುಂಡರಗಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಉದಯಕುಮಾರ ಯಲಿವಾಳ, ತಹಶೀಲ್ದಾರ್ ರಾಘವೇಂದ್ರ ಕುಲಕರ್ಣಿ, ಉಪನ್ಯಾಸಕ ಎನ್.ಟಿ. ಪೂಜಾರ, ಸಮಾಜ ಕಲ್ಯಾಣ ಇಲಾಖೆಯ ಎಸ್.ವಿ. ಸಂಕನೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ರೈತರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

> "ಅರಣ್ಯ ಸಾಗುವಳಿ ರೈತರು, ಬಗರಹುಕುಂ ರೈತರು ಹಾಗೂ ತಾಂಡಾ-ಹಾಡಿ ಪ್ರದೇಶದ ಜನರಿಗೆ ಹಕ್ಕುಪತ್ರ ದೊರಕಿಸಿಕೊಡುವ ಕುರಿತು ರಾಜ್ಯಮಟ್ಟದಲ್ಲಿ ಅನೇಕ ಹೋರಾಟಗಳನ್ನು ನಡೆಸಲಾಗಿದೆ. ಸರ್ಕಾರ ನೈಜ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲು ಆದೇಶಿಸಿದ್ದು, ದಾಖಲಾತಿ ಪರಿಶೀಲನೆಯಲ್ಲಿ ಗೊಂದಲ ನಿವಾರಣೆಗೆ ಇಂತಹ ಕಾರ್ಯಾಗಾರಗಳು ಉಪಯುಕ್ತವಾಗಿವೆ. ಮುಂದಿನ ದಿನಗಳಲ್ಲಿ ಹಳ್ಳಿ-ಹಳ್ಳಿಗಳಲ್ಲೂ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗುವುದು."

**– ರವಿಕಾಂತ ಅಂಗಡಿ, ವಕೀಲರು ಹಾಗೂ ಉತ್ತರ ಕರ್ನಾಟಕ ಮಹಾಸಭಾ ರಾಜ್ಯ ಘಟಕ ಅಧ್ಯಕ್ಷರು**

# ಬಿಡಾಡಿ ದನಗಳ ಹಾವಳಿಗೆ ಬೆಚ್ಚಿದ ಹಗರಿಬೊಮ್ಮನಹಳ್ಳಿ!

▶▶ ಮೊದಲನೇ ಪುಟದಿಂದ

ಇತ್ತೀಚೆಗೆ ಅರಳೀಹಳ್ಳಿಯ ರಫಿ ಹಾಗೂ ಇನ್ನೋರ್ವ ಬಾಲಕನಿಗೆ ಬಿಡಾಡಿ ದನಗಳು ಗುದ್ದಿದ ಪರಿಣಾಮ ಗಾಯಗೊಂಡಿದ್ದು, ಅದೃಷ್ಟವಶಾತ್ ಪ್ರಾಣಾಪಾಯ ತಪ್ಪಿದೆ. "ಒಂದು ವೇಳೆ ದೊಡ್ಡ ಅನಾಹುತ ಸಂಭವಿಸಿದರೆ ಹೊಣೆ ಯಾರು?" ಎಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

ಪಟ್ಟಣದಲ್ಲಿ ಬಿಡಾಡಿ ದನಗಳನ್ನು ಕೆಲವರು ಸಾಕಿ ಹಗಲಿನಲ್ಲಿ ಎಲ್ಲೆಂದರಲ್ಲಿ ಬಿಟ್ಟು, ರಾತ್ರಿ ತಮ್ಮ ಸ್ಥಳಗಳಿಗೆ ಕರೆದುಕೊಂಡು ಹೋಗುತ್ತಿದ್ದಾರೆ. ದನಗಳಿಂದ ಹಾಲು ಹಾಗೂ ಗೊಬ್ಬರದ ಲಾಭ ಪಡೆಯುವವರು ಸಾರ್ವಜನಿಕರ ಸುರಕ್ಷತೆಯನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಇದರ ಜೊತೆಗೆ ಬೀದಿ ನಾಯಿ ಹಾಗೂ ಹಂದಿಗಳ ಹಾವಳಿಯೂ ಹೆಚ್ಚಾಗಿದ್ದು, ಕೆಲವೆಡೆ ಸತ್ತ ನಾಯಿಗಳನ್ನು ಜನವಸತಿ ಪ್ರದೇಶಗಳಲ್ಲಿ ಬಿಸಾಡುತ್ತಿರುವುದರಿಂದ ದುರ್ವಾಸನೆ ಹರಡಿ ಸಾರ್ವಜನಿಕ ಆರೋಗ್ಯಕ್ಕೂ ಅಪಾಯ ಎದುರಾಗಿದೆ.

ಸತ್ತ ಪ್ರಾಣಿಗಳನ್ನು ವೈಜ್ಞಾನಿಕವಾಗಿ ದಫನ್ ಮಾಡುವ ಬದಲು ಸಾರ್ವಜನಿಕ ಸ್ಥಳಗಳಲ್ಲಿ ಎಸೆಯುತ್ತಿರುವುದರಿಂದ ಪರಿಸರ ಮಾಲಿನ್ಯ ಹೆಚ್ಚುತ್ತಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಕೂಡ ಎದುರಾಗಿದೆ ಎಂದು ನಾಗರಿಕರು ಆತಂಕ ವ್ಯಕ್ತಪಡಿಸಿದ್ದಾರೆ. ಪಟ್ಟಣದಲ್ಲಿ ನಾಯಿ, ಹಂದಿ ಹಾಗೂ ಬಿಡಾಡಿ ದನಗಳ ನಿಯಂತ್ರಣ ಪುರಸಭೆಯ ಜವಾಬ್ದಾರಿಯಾಗಿದ್ದರೂ, ಅಧಿಕಾರಿಗಳು ಸಮರ್ಪಕ ಕ್ರಮ ಕೈಗೊಳ್ಳುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ.

### ಗದುಗಿನಲ್ಲಿ ಸಾಹಿತ್ಯ, ಸಂವಾದ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಸಂಭ್ರಮ

# ಇಂದಿನಿಂದ ಎರಡು ದಿನಗಳ ಮಕ್ಕಳ ಸಾಹಿತ್ಯ ಸಮ್ಮೇಳನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಹೈಟೆಕ್ ತರಬೇತಿ ಕೇಂದ್ರದ ಸಹಯೋಗದಲ್ಲಿ ಮೇ 9 ಮತ್ತು 10ರಂದು ಎರಡು ದಿನಗಳ ಮಕ್ಕಳ ಸಾಹಿತ್ಯ ಸಮ್ಮೇಳನ ನಗರದ ವಿಜಯ ಲಲಿತಕಲಾ ಮಹಾವಿದ್ಯಾಲಯದ ರಾಜೀವಗಾಂಧಿನಗರದಲ್ಲಿ ನಡೆಯಲಿದೆ.

ಸಮ್ಮೇಳನದಲ್ಲಿ ಮಕ್ಕಳ ಸಾಹಿತ್ಯದ ಬೆಳವಣಿಗೆ ಕುರಿತು ಮಕ್ಕಳ ಸಾಹಿತಿಗಳೊಂದಿಗೆ ಚರ್ಚೆ, ಸಂವಾದ ಹಾಗೂ ಮಕ್ಕಳಿಗಾಗಿ ವಿವಿಧ ಪ್ರಾಯೋಗಿಕ ಸಾಹಿತ್ಯ ಚಟುವಟಿಕೆಗಳು ಜರುಗಲಿವೆ.

ಬೆಳಿಗ್ಗೆ 9-30ಕ್ಕೆ ಸಾಯಿಬಾಬಾ ದೇವಸ್ಥಾನದಿಂದ ವಿಜಯ ಲಲಿತಕಲಾ ಮಹಾವಿದ್ಯಾಲಯದವರೆಗೆ ಸಮ್ಮೇಳನಾಧ್ಯಕ್ಷರ ನೇತೃತ್ವದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ನಡೆಯಲಿದೆ.

ಅಶೋಕ ಅಕ್ಕಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವೆಂಕಟೇಶಯ್ಯ, ಬಸವರಾಜ ಬಳ್ಳಾರಿ, ಡಿ.ಎಸ್. ತಳವಾರ, ಜಗದೀಶ ಪೂಜಾರ ಹಾಗೂ ಸಿ.ಕೆ.ಎಚ್. ಕಡಣಿ ಶಾಸ್ತ್ರಿ ಭಾಗವಹಿಸುವರು.

ಶಂಕರ ಹಲಗತ್ತಿಯಿಂದ ಉದ್ಘಾಟನೆ ಬೆಳಿಗ್ಗೆ 10-30ಕ್ಕೆ ನಡೆಯುವ ಮಕ್ಕಳ ಸಾಹಿತ್ಯ ಸಮ್ಮೇಳನವನ್ನು ಶಂಕರ ಹಲಗತ್ತಿ ಉದ್ಘಾಟಿಸುವರು. ಸಮ್ಮೇಳನಾಧ್ಯಕ್ಷರಾಗಿ ಹಿರಿಯ ಮಕ್ಕಳ ಸಾಹಿತಿ ತಯಬಅಲಿ ಹೊಂಬಳ ನುಡಿಗಳನ್ನಾಡುವರು.

ನಿಕಟಪೂರ್ವ ಸಮ್ಮೇಳನಾಧ್ಯಕ್ಷೆ ಕು. ನಯನಾ ಅಳವಂಡಿ ಭಾಗವಹಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಗೌಡಪ್ಪ ಹುಲ್ಲೂರ ಆಶಯ ನುಡಿಗಳನ್ನಾಡಲಿದ್ದು, ಸಮ್ಮೇಳನಾಧ್ಯಕ್ಷರ ಬದುಕು-ಬರಹ ಕುರಿತು ಡಾ. ನಿಂಗು ಸೊಲಗಿ ಮಾತನಾಡುವರು.

ಮುಖ್ಯ ಅತಿಥಿಗಳಾಗಿ ಎಲ್.ಡಿ. ಚಂದಾವರಿ, ಆರ್.ಎಸ್. ಬುರಡಿ, ಜಿ.ಎಂ. ಮುಂದಿನಮನಿ, ಆರ್.ವಿ. ಶೆಟ್ಟೆಪ್ಪನವರ, ಕೆ.ಎಚ್. ಬೇಲೂರ, ಅನ್ನದಾನಿ ಹಿರೇಮಠ ಹಾಗೂ ಡಾ. ಜಿ.ಬಿ. ಪಾಟೀಲ ಭಾಗವಹಿಸುವರು.

ಮಕ್ಕಳ ಸಾಹಿತಿಗಳ ಸಮಾವೇಶ ಮಧ್ಯಾಹ್ನ 2-30ಕ್ಕೆ ನಡೆಯುವ ಮಕ್ಕಳ ಸಾಹಿತಿಗಳ ಸಮಾವೇಶದಲ್ಲಿ ಮಕ್ಕಳ ಸಾಹಿತಿಗಳೊಂದಿಗೆ ಚರ್ಚೆ-ಸಂವಾದ ಗೋಷ್ಠಿ ನಡೆಯಲಿದೆ. ಆರ್.ಬಿ. ಗುರುಬಸವರಾಜ ಆಶಯ ನುಡಿಗಳನ್ನಾಡಲಿದ್ದು, ಅಧ್ಯಕ್ಷತೆಯನ್ನು ಡಾ. ರಾಜೇಂದ್ರ ಗಡಾದ ವಹಿಸುವರು. "ಮಕ್ಕಳು ಮತ್ತು ಸಾಹಿತ್ಯಾಭಿರುಚಿ" ವಿಷಯವಾಗಿ ವೀರೇಶ ಮೇಟಿ ಹಾಗೂ "ಮಕ್ಕಳ ಸಾಹಿತ್ಯದ ಹೊಸ ಹೊಳಹುಗಳು" ವಿಷಯವಾಗಿ ಡಾ. ವಿನಾಯಕ ಕಮತದ ಉಪನ್ಯಾಸ ನೀಡುವರು.

ಗೋಷ್ಠಿಯಲ್ಲಿ ಕೊತ್ತಲ ಮಹಾದೇವಪ್ಪ, ಬ.ಭೀ. ನಾಗನೂರ, ಪಿ.ಬಿ. ಖರಾಟೆ ಹಾಗೂ ಚಂದ್ರಕಲಾ ಇಟಗಿಮಠ ಭಾಗವಹಿಸುವರು.

ಮಕ್ಕಳಿಗಾಗಿ ವಿಶೇಷ ಚಟುವಟಿಕೆ ಸಮಾನಾಂತರ ಗೋಷ್ಠಿಗಳಲ್ಲಿ ಮಕ್ಕಳಿಗಾಗಿ ವಿವಿಧ ಪ್ರಾಯೋಗಿಕ ಚಟುವಟಿಕೆಗಳನ್ನು ಆಯೋಜಿಸಲಾಗಿದೆ.

"ಮಜಾ-ಗಟಾ ಭಾಷಾ ಆಟಗಳು" ಗೋಷ್ಠಿಯಲ್ಲಿ ಎಂ.ಎಸ್. ಪೂಜಾರ ಅವರು ಅದಲು-ಬದಲು ಕಂಚಿ ಕದಲು, ಜಾಣಪದ ಸ್ಪರ್ಧೆ, ಅಕ್ಷರ ಮುಷ್ಠಿಕಾ ವಿದ್ಯೆ, ಸಾವಿರ ಲೆಕ್ಕಗಳ ಸರದಾರ, ಗಣಿತ ಚಟುವಟಿಕೆ, ಇಪ್ಪತ್ತು-ಇಪ್ಪತ್ತು ಪಂದ್ಯ, ಪೇಚಿನ ಪ್ರಶ್ನೆಗಳು ಹಾಗೂ ಮ್ಯಾಜಿಕ್ ಕಾರ್ಡ್ ತಯಾರಿಕೆ ಸೇರಿದಂತೆ ಹಲವು ಚಟುವಟಿಕೆಗಳನ್ನು ನಡೆಸಿಕೊಡುವರು.

ಇದರೊಂದಿಗೆ ಕತೆ ರಚನೆ, ಕವನ ರಚನೆ, ಚಿತ್ರಕಲೆ ಹಾಗೂ ಕರಕುಶಲ ಚಟುವಟಿಕೆಗಳೂ ನಡೆಯಲಿದ್ದು, ಆಸಕ್ತ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟಕರು ಮನವಿ ಮಾಡಿದ್ದಾರೆ.

### ಇಂದಿನಿಂದ ಎರಡು ದಿನಗಳ ಕಾಲ ನಡೆಯುವ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ನಿಮಿತ್ತ ವಿಶೇಷ ಲೇಖನ

# ಮಕ್ಕಳ ಮನಸ್ಸಿನ ಮಾಂತ್ರಿಕ ತಯಬಅಲಿ ಹೊಂಬಳ



ಮಾತಿನಲ್ಲಿ ನಿರ್ಮಲತೆ, ಕಾಯಕದಲ್ಲಿ ನಿಶ್ಚಲತೆ, ಪ್ರವೃತ್ತಿಯಲ್ಲಿ ಸಾತ್ವಿಕತೆ, ನಡೆನುಡಿಯಲ್ಲಿ ಸರಳತೆ – ಈ ಎಲ್ಲ ಗುಣಗಳ ಸಮ್ಮಿಳನವೇ ಹಿರಿಯ ಮಕ್ಕಳ ಸಾಹಿತಿ ತಯಬಅಲಿ ಅ. ಹೊಂಬಳ.

ಬೋಧಕ, ಕಥೆಗಾರ, ಕವಿ, ಕಾದಂಬರಿಕಾರ, ಸಂಘಟಕ ಹಾಗೂ ಸ್ನೇಹಜೀವಿಯಾಗಿ ಗುರುತಿಸಿಕೊಂಡಿರುವ ಅವರು ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಮಕ್ಕಳ ಮನಸ್ಸಿನೊಳಗೆ ಇಳಿದು, ಅವರ ಕಲ್ಪನಾ ಲೋಕವನ್ನು ಅರಿತು, ಓದುತ್ತಾ ಹೋಗುವಂತೆ ಕಥೆ–ಕವನಗಳನ್ನು ಹೆಣೆಯುವುದು ಸುಲಭದ ಕೆಲಸವಲ್ಲ. ಆದರೆ ಅದನ್ನು ಅಚ್ಚುಕಟ್ಟಾಗಿ ಸಾಧಿಸಿ ಮಕ್ಕಳ ಹೃದಯ ಗೆದ್ದ ಸಾಹಿತಿ ತಯಬಅಲಿ ಹೊಂಬಳ.

ಇಂದು ಗದಗದ ವಿಜಯ ಲಲಿತಕಲಾ ಮಂದಿರದಲ್ಲಿ ನಡೆಯಲಿರುವ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಅವರು ಆಯ್ಕೆಯಾಗಿರುವುದು ಸಾಹಿತ್ಯಾಭಿಮಾನಿಗಳು, ಸ್ನೇಹಿತರು ಹಾಗೂ ಬಂಧು ಬಳಗಕ್ಕೆ ಸಂತಸದ ಕ್ಷಣವಾಗಿದೆ.

**ಡಂಬಳದ ಮಣ್ಣಿನಲ್ಲಿ ಅರಳಿದ ಸಾಹಿತ್ಯ ಪ್ರತಿಭೆ**

ಮೂಲತಃ ಮುಂಡರಗಿ ತಾಲೂಕಿನ ಡಂಬಳ ಗ್ರಾಮದವರಾದ ತಯಬಅಲಿ ಹೊಂಬಳ ಅವರು 1967ರಲ್ಲಿ ಜನಿಸಿದರು. ಬಾಲ್ಯದಿಂದಲೇ ಚಿತ್ರಕಲೆ ಹಾಗೂ ಸಾಹಿತ್ಯದ ಬಗ್ಗೆ ಅಪಾರ ಆಸಕ್ತಿ ಹೊಂದಿದ್ದ ಅವರು ತಮ್ಮ ಪ್ರಾಥಮಿಕ ಮತ್ತು ಕಾಲೇಜು ಶಿಕ್ಷಣವನ್ನು ಡಂಬಳದಲ್ಲೇ ಪೂರ್ಣಗೊಳಿಸಿದರು.

ಮುಂದೆ ಪ್ರತಿಷ್ಠಿತ ವಿಜಯ ಕಲಾಮಂದಿರದಲ್ಲಿ ಎಂ.ಎ.ಗೆ ಸಮನಾದ ಎ.ಎಂ., ಜಿ.ಡಿ. ಶಿಕ್ಷಣ ಪಡೆದ ಅವರು ಸಾಹಿತ್ಯ ಹಾಗೂ ಸಂಘಟನಾ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿದರು.

ಅವರ ಸಾಹಿತ್ಯ ಮತ್ತು ಸಾಮಾಜಿಕ ಸೇವೆಯನ್ನು ಪರಿಗಣಿಸಿ ತಮಿಳುನಾಡಿನ ಇಂಡಿಯನ್ ಎಂಪೈರ್ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಿದೆ.

**ಶಿಕ್ಷಕರಾಗಿ ಸಾವಿರಾರು ಬದುಕುಗಳಿಗೆ ಬೆಳಕು**

ಟೈಪಿಂಗ್ ಕ್ಷೇತ್ರದಲ್ಲಿ ವಿಶಿಷ್ಟ ಪರಿಣತಿ ಹೊಂದಿದ್ದ ತಯಬಅಲಿ ಹೊಂಬಳ ಅವರು 1990ರಿಂದ 1997ರವರೆಗೆ ಪತ್ತೇಪೂರ ವಾಣಿಜ್ಯ ವಿದ್ಯಾಲಯದಲ್ಲಿ ಬೋಧಕರಾಗಿ ಕಾರ್ಯನಿರ್ವಹಿಸಿದರು.

ಅದಕ್ಕೂ ಮುನ್ನ ಲಕ್ಷ್ಮೇಶ್ವರದ ಅಕ್ಕಿ ಮಹಾವಿದ್ಯಾಲಯದಲ್ಲಿ ಉಪನ್ಯಾಸಕರಾಗಿಯೂ ಸೇವೆ ಸಲ್ಲಿಸಿದ್ದರು. 1992ರಿಂದ 1995ರವರೆಗೆ ಗೋಕಾಕದ ಡಾ. ಅಂಬೇಡ್ಕರ್ ಹೈಸ್ಕೂಲಿನಲ್ಲಿ ಕಲಾ ಶಿಕ್ಷಕರಾಗಿದ್ದರು.

1995ರಲ್ಲಿ "ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯ" ಸ್ಥಾಪಿಸಿದ ಅವರು, ಇಂದಿಗೂ ಅದರ ಮಾಲೀಕರಾಗಿ, ಶಿಕ್ಷಕರಾಗಿ ಹಾಗೂ ಪ್ರಾಚಾರ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ನಾಲ್ಕು ದಶಕಗಳ ಬೋಧನಾ ಜೀವನದಲ್ಲಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿರುವ ಅವರು, ತಮ್ಮ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದ್ದಾರೆ.

**ಮಕ್ಕಳಿಗಾಗಿ ಸಾವಿರಕ್ಕೂ ಹೆಚ್ಚು ಕಥೆಗಳು**

"ಮಕ್ಕಳು ಸೃಜನಶೀಲರಾಗಬೇಕು, ಸಂವೇದನಾಶೀಲತೆ ಅವರಲ್ಲಿ ಬೆಳೆಯಬೇಕು" ಎಂಬ ಆಶಯದೊಂದಿಗೆ ತಯಬಅಲಿ ಹೊಂಬಳ ಅವರು ಸಾವಿರಕ್ಕೂ ಹೆಚ್ಚು ಮಕ್ಕಳ ಕಥೆಗಳನ್ನು ರಚಿಸಿದ್ದಾರೆ.

1983ರಿಂದ ನಿರಂತರ ಸಾಹಿತ್ಯ ಕೃಷಿಯಲ್ಲಿ ತೊಡಗಿರುವ ಅವರು ಇದುವರೆಗೆ 54ಕ್ಕೂ ಹೆಚ್ಚು ಕೃತಿಗಳನ್ನು ಸಾಹಿತ್ಯ ಲೋಕಕ್ಕೆ ನೀಡಿದ್ದಾರೆ.

**ಕಾದಂಬರಿಗಳಲ್ಲೂ ವಿಶಿಷ್ಟ ಛಾಪು**

ಕಾದಂಬರಿ ಪ್ರಕಾರದಲ್ಲಿಯೂ ತಮ್ಮದೇ ಛಾಪು ಮೂಡಿಸಿರುವ ತಯಬಅಲಿ ಹೊಂಬಳ ಅವರು ಹುಲಿಬಾಬಾ ಮತ್ತು ನಲವತ್ತು ಪ್ರಾಣಿಗಳು, ಅಂಧಸ್ವರ, ಕನ್ನಡದ ಮೇಷ್ಟ್ರು, ಕರಿಯ, ಭೋಜರಾಜ ಸೇರಿದಂತೆ 11ಕ್ಕೂ ಹೆಚ್ಚು ಕಾದಂಬರಿಗಳನ್ನು ಪ್ರಕಟಿಸಿದ್ದಾರೆ.

ಅವರ "ಕರಿಯ" ಕಾದಂಬರಿ ಇದೀಗ ಚಲನಚಿತ್ರವಾಗುತ್ತಿರುವುದು ಸಾಹಿತ್ಯ ಕ್ಷೇತ್ರಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಕವಿ ಮನಸ್ಸಿನ ಈ ಸಾಹಿತಿ 3 ಕವನ ಸಂಕಲನಗಳು, ಬೆರಳಚ್ಚು ಮಾರ್ಗದರ್ಶಿ ಹಾಗೂ ಪ್ರವಾದಿ ಮಹಮ್ಮದ್ ಕುರಿತು ಹಲವು ಕೃತಿಗಳನ್ನು ಪ್ರಕಟಿಸಿದ್ದಾರೆ.

ತಯಬಅಲಿ ಹೊಂಬಳ ಅವರು ಗದಗ ತಾಲೂಕು ಮಕ್ಕಳ ಸಾಹಿತ್ಯ ವೇದಿಕೆ ಅಧ್ಯಕ್ಷರಾಗಿ, ಗದಗ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಶಾಲೆಗಳ ಸಂಘದ ಅಧ್ಯಕ್ಷರಾಗಿ ಹಾಗೂ ದಿ. ಅಬ್ದುಲ್ ಖಾದರ್ ಬಾಲ ಸಾಹಿತ್ಯ ಪ್ರತಿಷ್ಠಾನದ ಅಧ್ಯಕ್ಷರಾಗಿ ವಿವಿಧ ಸಾಂಸ್ಕೃತಿಕ ಸಂಘಟನೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ.

**ಸರಳ ಜೀವನ, ಮಹತ್ತರ ಸಾಧನೆ**

ಪತ್ನಿ ತಾಹೇರಾಬೇಗಂ, ಮಕ್ಕಳು ಮೊಹ್ಮದ್, ಫೀಜಾ ಸುಲ್ತಾನಾ ಹಾಗೂ ಶಬನಮ್ ಅವರೊಂದಿಗೆ ಸುಖೀ ಕುಟುಂಬ ಜೀವನ ನಡೆಸುತ್ತಿರುವ ತಯಬಅಲಿ ಹೊಂಬಳ ಅವರು "ಕಾಯಕವೇ ಕೈಲಾಸ" ಎಂಬ ತತ್ವವನ್ನು ಅಕ್ಷರಶಃ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ. 3ನೇ ಗದಗ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಅವರ ಆಯ್ಕೆ ಸಾಹಿತ್ಯ ಲೋಕಕ್ಕೆ ಹೆಮ್ಮೆ ಹಾಗೂ ಅಭಿಮಾನದ ಸಂಗತಿಯಾಗಿ ಪರಿಣಮಿಸಿದೆ.

– ಡಾ. ದತ್ತಪ್ರಸನ್ನ ಪಾಟೀಲ, ಗದಗ

**ಪ್ರಶಸ್ತಿ-ಪುರಸ್ಕಾರಗಳ ಸರಮಾಲೆ**

ಸಾಹಿತ್ಯ ಮತ್ತು ಸಾಂಸ್ಕೃತಿಕ ಸೇವೆಗೆ ಅನೇಕ ಸಂಘ ಸಂಸ್ಥೆಗಳು ತಯಬಅಲಿ ಹೊಂಬಳ ಅವರನ್ನು ಗೌರವಿಸಿವೆ.
ಅವರಿಗೆ ಸಂದ ಪ್ರಮುಖ ಪ್ರಶಸ್ತಿಗಳು:

1. ಹರ್ಡೇಕರ ಮಂಜಪ್ಪ ಪ್ರಶಸ್ತಿ
2. ಕದಂಬ ಸೇವಾರತ್ನ
3. ಆಜೂರು ಪ್ರಶಸ್ತಿ
4. ಸಾಹಿತ್ಯ ಚಿಗುರು
5. ಕನಕಶ್ರೀ
6. ವಿಶ್ವೇಶ್ವರಯ್ಯ ರಾಷ್ಟ್ರೀಯ ಸಾಹಿತ್ಯ ಪ್ರಶಸ್ತಿ
7. ಗುರುಕುಲ ಸಾಹಿತ್ಯ ಶರಭ
8. ಕರುನಾಡು ಹರಿಕಾರ ಪ್ರಶಸ್ತಿ
9. ಯುಗಪುರುಷ ಪ್ರಶಸ್ತಿ
10. ಬಸವ ಪುರಸ್ಕಾರ

"ಮಕ್ಕಳ ಮನಸ್ಸನ್ನು ಅರ್ಥ ಮಾಡಿಕೊಂಡು ಬರೆಯುವ ಸಾಹಿತಿ ವಿರಳ. ಅಂತಹ ವಿರಳ ಸಾಹಿತಿಗಳಲ್ಲಿ ತಯಬಅಲಿ ಹೊಂಬಳ ಪ್ರಮುಖರು."

**ತಯಬಅಲಿ ಹೊಂಬಳ ಅವರ ಪ್ರಮುಖ ಮಕ್ಕಳ ಕಥಾ ಸಂಕಲನಗಳಲ್ಲಿ-**

1. ಮಮತೆಯ ಮುತ್ತುಗಳು
2. ಅಮ್ಮ ಹೇಳಮ್ಮ
3. ಪುಟಾಣಿ ಫೀಜಾ
4. ದೊಡ್ಡವರೆಲ್ಲ ಜಾಣರಲ್ಲ
5. ಚುಕ್ಕೆ ಚಂದ್ರಮ
6. ಹಾಲು ಸಕ್ಕರೆ
7. ಬಾರೋ ಬಾರೋ ಚಂದ್ರಮ

ಮುಂತಾದವು ವಿಶೇಷ ಜನಪ್ರಿಯತೆ ಪಡೆದಿವೆ.

ಇದರೊಂದಿಗೆ 25ಕ್ಕೂ ಹೆಚ್ಚು ಕಥಾ ಸಂಕಲನಗಳು, 5 ಸಂಪಾದಿತ ಕಥಾ ಸಂಕಲನಗಳು ಹಾಗೂ 4 ಮಕ್ಕಳ ಕಥಾ ಸಂಪುಟಗಳನ್ನು ಪ್ರಕಟಿಸಿದ್ದಾರೆ.

### ಮಹಾ ಮಾನವತಾವಾದಿ ಬಸವಣ್ಣ ಜಗತ್ತಿನ ಸಾಂಸ್ಕೃತಿಕ ನಾಯಕ: ಪ್ರೊ. ಕೆ.ಎಚ್. ಬೇಲೂರ

# ಬುದ್ಧ-ಬಸವ-ಅಂಬೇಡ್ಕರ್ ವಿಚಾರಗಳು ಇಂದಿಗೂ ಪ್ರಸ್ತುತ

■ ವಿಜಯಸಾಕ್ಷಿ ಸುದ್ದಿ, ಗದಗ




ಜಗತ್ತಿಗೆ ಮೊದಲ ಬಾರಿಗೆ ಪ್ರಜಾಪ್ರಭುತ್ವದ ಕಲ್ಪನೆ ನೀಡಿದ ಮಹಾ ಮಾನವತಾವಾದಿ ಬಸವಣ್ಣನವರು ಅಂದಿಗೂ, ಇಂದಿಗೂ ಹಾಗೂ ಮುಂದೆಯೂ ಪ್ರಸ್ತುತವಾಗಿದ್ದು, ಇಡೀ ಜಗತ್ತಿಗೆ ಸಾಂಸ್ಕೃತಿಕ ನಾಯಕರಾಗಿದ್ದಾರೆ ಎಂದು ನಿವೃತ್ತ ಪ್ರಾಚಾರ್ಯರು ಹಾಗೂ ಖ್ಯಾತ ಸಂಸ್ಕೃತಿ ಚಿಂತಕರಾದ ಪ್ರೊ. ಕೆ.ಎಚ್. ಬೇಲೂರ ಹೇಳಿದರು.

ನಗರದ ಮುಳಗುಂದ ನಾಕಾ ಸಮೀಪದ ಶ್ರೀ ಅಡವೀಂದ್ರ ಸ್ವಾಮಿ ಮಠದ ಅನ್ನಪೂರ್ಣೇಶ್ವರ ಮಂದಿರದಲ್ಲಿ ನಡೆದ 347ನೇ ಮಾಸಿಕ ಶಿವಾನುಭವ ಗೋಷ್ಠಿ ಹಾಗೂ ಬುದ್ಧ, ಬಸವ, ಅಂಬೇಡ್ಕರ್ ಜಯಂತೋತ್ಸವ ಸಮಾರಂಭದಲ್ಲಿ "ಬುದ್ಧ, ಬಸವ, ಅಂಬೇಡ್ಕರರ ವಿಚಾರಧಾರೆಗಳ ಪ್ರಸ್ತುತತೆ" ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು.

ಬಸವಣ್ಣನವರು ಬಿದ್ದವರನ್ನು ಎಬ್ಬಿಸುವ ಕೆಲಸ ಮಾಡುತ್ತಾ ಎಲ್ಲರಿಗೂ ಕಾಯಕ ತತ್ವ ಬೋಧಿಸಿದರು. ಸಮಾಜದಲ್ಲಿ ಸಮಾನತೆ, ಮಾನವೀಯತೆ ಮತ್ತು ಪ್ರಜ್ಞೆಯ ಬೆಳಕು ಹರಡಿದ ಮಹಾನ್ ದಾರ್ಶನಿಕರಾಗಿದ್ದಾರೆ ಎಂದರು.

ಭಗವಾನ್ ಬುದ್ಧನ ತತ್ವಗಳು ಜಗತ್ತಿನಲ್ಲಿ ಶಾಂತಿ ಮತ್ತು ಮಾನವೀಯತೆ ನೆಲೆಸಲು ಇಂದಿಗೂ ಪ್ರಸ್ತುತವಾಗಿವೆ. ಅಹಿಂಸೆಯ ಮೂಲಕ ಇಡೀ ಜಗತ್ತನ್ನೇ ಗೆದ್ದ ಬುದ್ಧರು ಎಲ್ಲರಿಗೂ ಆದರ್ಶವಾಗಿದ್ದಾರೆ ಎಂದು ಪ್ರೊ. ಬೇಲೂರ ಹೇಳಿದರು.

ಗದಗ – ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷ ಹಾಗೂ ದೇವಿ ಉಪಾಸಕ ಶಂಕರ್ ಹಾನಗಲ್ ಮಾತನಾಡಿ, ಮಹಾನ್ ದಾರ್ಶನಿಕರ ಜಯಂತಿಗಳನ್ನು ಕೇವಲ ಫೋಟೋ ಪೂಜೆ ಮತ್ತು ಮೆರವಣಿಗೆ ಮೂಲಕ ಆಚರಿಸಿದರೆ ಸಾಲದು. ಅವರ ವಿಚಾರಧಾರೆಗಳನ್ನು ವಿಶೇಷವಾಗಿ ಮಕ್ಕಳಿಗೆ ತಲುಪಿಸುವ ಕಾರ್ಯವಾಗಬೇಕು ಎಂದರು.

ಮಾಸಿಕ ಶಿವಾನುಭವ ಗೋಷ್ಠಿ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಹಾಗೂ ಶಿವಾನುಭವ ಸಮಿತಿ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಮಾತನಾಡಿ, ಬುದ್ಧ, ಬಸವ, ಗಾಂಧಿ ಹಾಗೂ ಅಂಬೇಡ್ಕರ್ ಅವರ ವಿಚಾರಗಳನ್ನು ಪ್ರತಿಯೊಬ್ಬರೂ ಬದುಕಿನಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಅಸಮಾನತೆ, ಭೇದಭಾವ, ಹಿಂಸೆ, ಕೊಲೆ, ಸುಲಿಗೆಗಳಿಗೆ ಅವಕಾಶವೇ ಇರುವುದಿಲ್ಲ ಎಂದರು.

"ಜಗತ್ತಿಗೆ ಪ್ರಜಾಪ್ರಭುತ್ವದ ಕಲ್ಪನೆ ನೀಡಿದ ಮಹಾ ಮಾನವತಾವಾದಿ ಬಸವಣ್ಣನವರು ಕರ್ನಾಟಕಕ್ಕಷ್ಟೇ ಅಲ್ಲ, ಇಡೀ ಜಗತ್ತಿಗೆ ಸಾಂಸ್ಕೃತಿಕ ನಾಯಕರಾಗಿದ್ದಾರೆ."

– ಪ್ರೊ. ಕೆ.ಎಚ್. ಬೇಲೂರ, ನಿವೃತ್ತ ಶಿಕ್ಷಕರು

ಅಡವೀಂದ್ರ ಸ್ವಾಮಿ ಮಠದ ಧರ್ಮದರ್ಶಿ ವೇದಮೂರ್ತಿ ಮಹೇಶ್ವರ ಸ್ವಾಮಿಗಳು ಸಮಾರಂಭದ ಸಮ್ಮುಖ ವಹಿಸಿ ಮಾತನಾಡಿ, ಬುದ್ಧ, ಬಸವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಬದುಕು ಸದಾಕಾಲ ಮಾರ್ಗದರ್ಶಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಬಸವ ತತ್ವ ಪ್ರತಿಪಾದಕ ಹಾಗೂ ನಿವೃತ್ತ ಪೌರಾಯುಕ್ತ ಜಗದೀಶ್ ಚಂದ್ರ ನಾಡಗೌಡರ ಅವರನ್ನು ಸನ್ಮಾನಿಸಲಾಯಿತು.

ವಿವಾಹ ರಜತ ಮಹೋತ್ಸವ ಅಂಗವಾಗಿ ಶಿವಾನುಭವದ ಭಕ್ತಿ ಸೇವೆಯಲ್ಲಿ ತೊಡಗಿರುವ ಲೇಖಕಿ ಜ್ಯೋತಿ ಡಾ. ರಾಜೇಂದ್ರ ಗಡಾದ ದಂಪತಿಗಳನ್ನೂ ಶ್ರೀಮಠದ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಆನಂದ ಹಿರೇಮಠ, ರೇಣುಕಾ ವಿ. ಬಾರಕೇರ, ಜ್ಯೋತಿ ರಾಜೇಂದ್ರ ಗಡಾದ, ಶಂಕರ್ ಹಾನಗಲ್ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಗೀತಾ ಹೂಗಾರ ಪ್ರಾರ್ಥಿಸಿದರು. ಉಮಾಪತಿ ಭೂಸನೂರಮಠ ಸ್ವಾಗತಿಸಿದರು. ಸಿದ್ದಣ್ಣ ಜವಳಿ ಹಾಗೂ ಗುರಪ್ಪ ನಿಡಗುಂದಿ ಪರಿಚಯಿಸಿದರು. ಮಾರುತಿ ಹೆಬ್ಬಾರೆ ವಂದಿಸಿದರು. ಬಿ.ಎಂ. ಕುಂದ್ರಾಳ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಎಲ್.ಎಸ್. ನೀಲಗುಂದ, ಬಿ.ಎಂ. ಬಿಳೆಯಲಿ, ಸುಶೀಲಮ್ಮ ಕೋಟಿ, ಪ್ರೊ. ಆರ್.ಎಂ. ಬಡಿಗೇರ, ಮಾಲತೇಶ ಪಾಟೀಲ, ಜಿ.ಎಂ. ಯಾನಮಶೆಟ್ಟಿ, ರಾಜೇಶ ಮಾರನಬೀಡ, ಕೆ.ಎಸ್. ಪಲ್ಲೇದ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಸುಧಾಮೂರ್ತಿ ಅವಹೇಳನ ಖಂಡಿಸಿ ಬ್ರಾಹ್ಮಣ ಸಂಘ ಪ್ರತಿಭಟನೆ




■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಲಾಗಿದೆ ಎಂದು ಆರೋಪಿಸಿ ಗದಗ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ಶುಕ್ರವಾರ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಬ್ರಾಹ್ಮಣ ಸಂಘದ ಸದಸ್ಯರು ಮಾನವ ಸರಪಳಿ ನಿರ್ಮಿಸಿ ಆಕ್ರೋಶ ವ್ಯಕ್ತಪಡಿಸಿ ಬಳಿಕ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಇತ್ತೀಚೆಗೆ ನಡೆದ ಸಿಇಟಿ ಪರೀಕ್ಷೆಯ ಸಂದರ್ಭದಲ್ಲಿ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಘಟನೆ ಖಂಡನೀಯ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಕುರಿತು ಅವಹೇಳನಕಾರಿ ಭಾಷಣ ಮಾಡಿದ ಬಿ.ಕೆ. ಹರಿಪ್ರಸಾದ್ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಘಟನೆಗಳನ್ನು ಖಂಡಿಸಿ ಸಂಘದ ವತಿಯಿಂದ ರಾಜ್ಯಮಟ್ಟದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಅನಿಲ ತೆಂಬದಮನಿ, ಗಿರೀಶ ಕುಲಕರ್ಣಿ, ಎಚ್.ಡಿ. ಪಾಟೀಲ, ವಾದಿರಾಜ ಕೌಜಲಗಿ, ರಾಜೇಂದ್ರ ಕುಲಕರ್ಣಿ, ಶ್ರೀಪಾದ ನಾಯಕ ತಮ್ಮಣ್ಣವರ, ಪ್ರಲ್ಹಾದ ನಾರಪ್ಪನವರ, ರಾಘವೇಂದ್ರ ನಾರಪ್ಪನವರ, ಶಿರೀಷ ದೀಕ್ಷಿತ್, ಭೂಷಣ ಹುಯಿಲಗೋಳ, ರವಿಚಂದ್ರನ್ ಕುಲಕರ್ಣಿ, ಸಂಜೀವ ಕುಲಕರ್ಣಿ, ಸತೀಶ ಕುಲಕರ್ಣಿ, ಶ್ರೀಧರ ದೇಸಾಯಿ, ವಿರೂಪಾಕ್ಷ ಫಳಿಗಿ, ರಾಘವೇಂದ್ರ ಕುಲಕರ್ಣಿ, ಶ್ರೀಧರ ಕುಲಕರ್ಣಿ, ಕುಬೇರ ಸರ್, ಕೃಷ್ಣಾಜಿ ನಾಡಗೇರ, ಸುಧೀಂದ್ರ ದೇಶಪಾಂಡೆ, ಗಿರೀಶ ಜೋಶಿ, ಸಂತೋಷ ಕುಲಕರ್ಣಿ, ಸಂತೋಷ ಪಾಟೀಲ, ಸತೀಶ ಮುಜುಮದಾರ, ನಾಗೇಶ ಗುಡಿ, ವಿನಾಯಕ ಮುತಾಲಿಕ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

### ಭಗೀರಥ ಜಯಂತ್ಯುತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಶಾಸಕ ಕೆ. ನೇಮಿರಾಜ ನಾಯ್ಕ್ ಘೋಷಣೆ

# 60 ಲಕ್ಷ ಅನುದಾನದಲ್ಲಿ ಭಗೀರಥ ಭವನ ಪೂರ್ಣ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ




ಪಟ್ಟಣದ ಭಗೀರಥ ಭವನದಲ್ಲಿ ನಡೆದ ಭಗೀರಥ ಜಯಂತ್ಯುತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಶಾಸಕ ಕೆ. ನೇಮಿರಾಜ ನಾಯ್ಕ ಮಾತನಾಡಿ, ಅನೇಕ ದಿನಗಳಿಂದ ಅಪೂರ್ಣವಾಗಿ ಉಳಿದಿರುವ ಭಗೀರಥ ಭವನ ಕಾಮಗಾರಿಯನ್ನು ಈ ವರ್ಷ ಎಚ್‌ಕೆಡಿಆರ್‌ಬಿ ಅನುದಾನದಡಿ 60 ಲಕ್ಷ ಅನುದಾನ ನೀಡಿ ಸಂಪೂರ್ಣಗೊಳಿಸಲಾಗುವುದು ಎಂದು ಘೋಷಿಸಿದರು.

ಸಮಾಜದ ಯುವಕರು ದುಷ್ಟ ಚಟಗಳಿಗೆ ಬಲಿಯಾಗದೆ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು.

ಭಗೀರಥ ಸಮಾಜದ ಕುಲಗುರುಗಳಾದ ಡಾ. ಪುರುಷೋತ್ತಮಾನಂದ ಪುರಿ ಸ್ವಾಮೀಜಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ, ತಾಲೂಕಿನಲ್ಲಿ ಸಮಾಜದ ಮುಖಂಡರು ಸಂಘಟಿತರಾಗಿ ವಿದ್ಯಾರ್ಥಿಗಳ ಪ್ರೋತ್ಸಾಹಕ್ಕಾಗಿ ಪ್ರತಿಭಾ ಪುರಸ್ಕಾರದಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು.

ಶ್ರಮಜೀವಿಗಳಾಗಿರುವ ಸಮಾಜದ ಜನರಿಗೆ ಸರ್ಕಾರದ ಸೌಲಭ್ಯಗಳನ್ನು ದೊರಕಿಸಿಕೊಡಲು ಜನಪ್ರತಿನಿಧಿಗಳು ಶ್ರಮಿಸಬೇಕು. ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಬರ್ಮಣ್ಣ ಮಾತನಾಡಿ, ಸರ್ಕಾರದ ಮಟ್ಟದಲ್ಲಿ ಶೈಕ್ಷಣಿಕ ಸಾಲಕ್ಕೆ ಹೆಚ್ಚಿನ ಅನುದಾನ ಮೀಸಲಿಡಲಾಗಿದ್ದು, ತಾಲೂಕಿನ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

"ಅನೇಕ ವರ್ಷಗಳಿಂದ ಅಪೂರ್ಣವಾಗಿರುವ ಭಗೀರಥ ಭವನ ಕಾಮಗಾರಿಯನ್ನು ಈ ವರ್ಷ 60 ಲಕ್ಷ ಅನುದಾನದಲ್ಲಿ ಪೂರ್ಣಗೊಳಿಸಲಾಗುವುದು. ಸಮಾಜದ ಯುವಕರು ದುಷ್ಟ ಚಟಗಳಿಂದ ದೂರವಿದ್ದು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಕೊಳ್ಳಬೇಕು"

– ಕೆ. ನೇಮಿರಾಜ ನಾಯ್ಕ, ಶಾಸಕ

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ 30 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಿದ್ದೇಶ್ವರ ಸ್ವಾಮೀಜಿ ಹಾಗೂ ಶಿವಮಾಂತ ಸ್ವಾಮೀಜಿಗಳು ಸಾನಿಧ್ಯ ವಹಿಸಿದ್ದರು.

ಮುಖಂಡರಾದ ಜಿಲ್ಲಾ ಜೆಡಿಎಸ್ ಘಟಕದ ಅಧ್ಯಕ್ಷ ಮೃತ್ಯುಂಜಯ ಬಾದಾಮಿ, ಶೇಕ್ರಪ್ಪ ಬಾಚಿಗೊಂಡನಹಳ್ಳಿ, ತಾಲೂಕು ಅಧ್ಯಕ್ಷ ವೈ. ಮಲ್ಲಿಕಾರ್ಜುನ, ಧರ್ಮಕರ್ತ ಕೃಷ್ಣಮೂರ್ತಿ, ತಾಲೂಕು ಉಪ್ಪಾರ ಸಂಘದ ಅಧ್ಯಕ್ಷ ಬಿ. ಕನಕಪ್ಪ, ಉಪಾಧ್ಯಕ್ಷ ರಾಮಣ್ಣ, ಪ್ರಧಾನ ಕಾರ್ಯದರ್ಶಿ ವೆಂಕಟೇಶ್, ಗೌರವಾಧ್ಯಕ್ಷ ಗುಂಡ್ರ ಹನುಮಂತಪ್ಪ, ರಾಜಣ್ಣ, ಬಂಡಿಹಳ್ಳಿ ಬಸವರಾಜ್, ಆಂಜಿನೇಪ್ಪಾ, ಅಂಕಸಮುದ್ರ ವೆಂಕಟೇಶ್, ಶೀಗೆನಹಳ್ಳಿ ಶಂಕ್ರಪ್ಪ, ಬಿ.ಎಸ್. ಬಸವರಾಜ್, ಸಾಹುಕಾರ್ ಕೊಟ್ರೇಶ್, ಉಪ್ಪಾರ್ ಗಟ್ಟಿ ವಿಜಯಕುಮಾರ್, ಅಯ್ಯಪ್ಪ ಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಸಿಡಿಲಿನ ಆಘಾತಕ್ಕೆ 36 ಕುರಿಗಳ ಬಲಿ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಉಪ್ಪಾರಗಟ್ಟಿ ಗ್ರಾಮದಲ್ಲಿ ಗುರುವಾರ ಸಂಜೆ ಸುರಿದ ಭಾರಿ ಮಳೆ ಹಾಗೂ ಸಿಡಿಲಿನ ಅಬ್ಬರಕ್ಕೆ 36 ಕುರಿಗಳು ಸಾವನ್ನಪ್ಪಿ ಕುರಿಗಾಯಿಗಳಿಗೆ ಭಾರೀ ನಷ್ಟ ಉಂಟಾಗಿದೆ.

ಗ್ರಾಮದ ಹೊರವಲಯದ ಕಾಡು ಪ್ರದೇಶದಲ್ಲಿ ಕುರಿ ಮೇಯಿಸುತ್ತಿದ್ದ ವೇಳೆ ಏಕಾಏಕಿ ಬಡಿದ ಸಿಡಿಲಿನಿಂದ ಯು.ಬಿ. ಅಜ್ಜಪ್ಪ ತಂದೆ ಹನುಮಂತಪ್ಪ ಅವರಿಗೆ ಸೇರಿದ 30 ಕುರಿಗಳು ಹಾಗೂ ಪೂಜಾರ್ ಸುರೇಶ್ ಅವರಿಗೆ ಸೇರಿದ 6 ಕುರಿಗಳು ಸ್ಥಳದಲ್ಲೇ ಮೃತಪಟ್ಟಿವೆ. ಘಟನೆಯಿಂದ ಕುರಿಗಾಯಿಗಳು ಕಂಗಾಲಾಗಿದ್ದಾರೆ.

ಸುದ್ದಿ ತಿಳಿದು ತಾಲೂಕು ದಂಡಾಧಿಕಾರಿ ಆರ್. ಕವಿತಾ ಹಾಗೂ ಪಶು ಸಂಗೋಪನಾ ಇಲಾಖೆಯ ಅಧಿಕಾರಿ ಡಾ. ಸೂರಪ್ಪ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಿದರು.

ಕುರಿ ಸಾಕಾಣಿಕೆಯನ್ನು ನಂಬಿಕೊಂಡಿದ್ದ ಕುಟುಂಬಗಳಿಗೆ ಈ ಘಟನೆ ದೊಡ್ಡ ಆಘಾತವಾಗಿದ್ದು, ಸರ್ಕಾರದಿಂದ ತುರ್ತು ಪರಿಹಾರ ನೀಡಬೇಕೆಂದು ಗ್ರಾಮದ ಮುಖಂಡ ಸಾಹುಕಾರ ಕೊಟ್ರೇಶ್ ಒತ್ತಾಯಿಸಿದರು.

ಈ ಕುರಿತು ಪ್ರತಿಕ್ರಿಯೆ ನೀಡಿರುವ ತಹಸೀಲ್ದಾರ್ ಆರ್. ಕವಿತಾ ಅವರು, "ಪ್ರಕೃತಿ ವಿಕೋಪದಡಿ ಸರ್ಕಾರದ ನಿಯಮಾನುಸಾರ ಪರಿಹಾರ ದೊರಕಿಸಲು ಜಿಲ್ಲಾಧಿಕಾರಿಗಳ ಗಮನಕ್ಕೆ ವಿಷಯ ತರಲಾಗುವುದು. ಕುರಿಗಾಯಿಗಳಿಗೆ ನೆರವು ಸಿಗುವಂತೆ ಕ್ರಮ ಕೈಗೊಳ್ಳುತ್ತೇವೆ," ಎಂದರು.

ಈ ವೇಳೆ ಗ್ರಾಮಸ್ಥರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

### ಗೊಬ್ಬರ ವಿತರಣೆ ನಿರ್ಬಂಧ, ಬೆಳೆ ವಿಮೆ ವಿಳಂಬಕ್ಕೆ ರೈತ ಸಂಘಟನೆಗಳ ಸಮಾಲೋಚನಾ ಸಭೆಯಲ್ಲಿ ಮುಖಂಡರ ಆಕ್ರೋಶ

# ರೈತರ ಸಮಸ್ಯೆಗೆ ಸ್ಪಂದಿಸದಿದ್ದರೆ ಪಾದಯಾತ್ರೆ ಎಚ್ಚರಿಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರ ವಿವಿಧ ಬೇಡಿಕೆಗಳು ಹಾಗೂ ಸಮಸ್ಯೆಗಳ ಕುರಿತು ಚರ್ಚಿಸಲು ಪಟ್ಟಣದ ಕೆಂಚಲಾಪುರ ಓಣಿಯ ಮಾಗಡಿ ಇಂಡಸ್ಟ್ರೀಸ್‌ನಲ್ಲಿ ಶುಕ್ರವಾರ ಕರೆಯಲಾಗಿದ್ದ ಸಮಾಲೋಚನಾ ಸಭೆಯಲ್ಲಿ ರೈತ ಸಂಘಟನೆಗಳ ಮುಖಂಡರು, ಹೋರಾಟಗಾರರು ಹಾಗೂ ರೈತರು ಭಾಗವಹಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಭೆಯಲ್ಲಿ ಮಾತನಾಡಿದ ಹೋರಾಟಗಾರ ಹಾಗೂ ವಕೀಲ ರವಿಕಾಂತ ಅಂಗಡಿ ಮತ್ತು ಸಮಗ್ರ ರೈತಪರ ಹೋರಾಟ ಸಮಿತಿ ಅಧ್ಯಕ್ಷ ಮಂಜುನಾಥ ಮಾಗಡಿ, ರೈತರಿಗೆ ರಸಗೊಬ್ಬರ ವಿತರಣೆ ವೇಳೆ ಎಫ್‌ಐಡಿ ಆಧಾರದಲ್ಲಿ "ಒಬ್ಬ ರೈತನಿಗೆ ಒಂದು ಚೀಲ ಗೊಬ್ಬರ" ಎಂಬ ನಿರ್ಬಂಧ ವಿಧಿಸಿರುವುದನ್ನು ತಕ್ಷಣ ಕೈಬಿಡಬೇಕು ಎಂದು ಆಗ್ರಹಿಸಿದರು.

ಮೊದಲಿನಂತೆ ರೈತರಿಂದ ಹೆಬ್ಬೆಟ್ಟು ಪಡೆದು ಗೊಬ್ಬರ ವಿತರಿಸುವ ಪದ್ಧತಿ ಕೈಬಿಟ್ಟು, ಓಟಿಪಿ ಮೂಲಕ ಬೀಜ ಹಾಗೂ ರಸಗೊಬ್ಬರ ವಿತರಣೆ ವ್ಯವಸ್ಥೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.



ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಕೆಲವೇ ಗೊಬ್ಬರಗಳ ಬಗ್ಗೆ ಮಾಹಿತಿ ನೀಡುತ್ತಿದ್ದಾರೆ. ಎಲ್ಲ ರಸಗೊಬ್ಬರಗಳ ಕುರಿತು ಸಮಗ್ರ ಮಾಹಿತಿ ರೈತರಿಗೆ ನೀಡುವಂತಾಗಬೇಕು ಎಂದು ಆಗ್ರಹಿಸಿದರು.

ರೈತ ಜಾಗೃತಿ ಕಾರ್ಯಕ್ರಮಗಳಿಗೆ ಕೃಷಿ ಇಲಾಖೆ ಹಣ ಖರ್ಚು ಮಾಡುತ್ತಿರುವುದಾದರೆ, ಮುಂಗಾರು ಆರಂಭಕ್ಕೂ ಮುನ್ನ ರೈತರಲ್ಲಿ ಸಮಗ್ರ ಜಾಗೃತಿ ಮೂಡಿಸಬೇಕು. ರೈತರಿಗೆ ಸಿಗುವ ಸೌಲಭ್ಯಗಳು ನೇರವಾಗಿ ಫಲಾನುಭವಿಗಳಿಗೆ ತಲುಪುವಂತಾಗಬೇಕು ಎಂದು ತಿಳಿಸಿದರು.

ಶಿರಹಟ್ಟಿ ಮತಕ್ಷೇತ್ರದಲ್ಲಿ ಜಿಪಿಎಸ್ ಮಾಹಿತಿ ಮಿಸ್‌ಮ್ಯಾಚ್ ಆಗಿರುವುದರಿಂದ ಸಾವಿರಾರು ರೈತರಿಗೆ ಬೆಳೆ ವಿಮೆ ಸಿಗುತ್ತಿಲ್ಲ. ಈ ಗೊಂದಲಕ್ಕೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕೃಷಿಕ ಸಮಾಜ (ನವದೆಹಲಿ) ತಾಲೂಕ ಅಧ್ಯಕ್ಷ ಚನ್ನಪ್ಪ ಷಣ್ಮುಖಿ ಹಾಗೂ ಪಕ್ಷಾತೀತ ರೈತಪರ ಹೋರಾಟ ವೇದಿಕೆ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ ಮಾತನಾಡಿ, ರೈತರಿಗೆ ಇನ್ನೂ ಬೆಳೆ ವಿಮೆ ಬಿಡುಗಡೆಯಾಗಿಲ್ಲ. ತಕ್ಷಣ ವಿಮೆ ಹಣ ಬಿಡುಗಡೆ ಮಾಡಬೇಕು. ರೈತರ ಸಮಸ್ಯೆ ಎದುರಾದಾಗ ಪಕ್ಷಾತೀತವಾಗಿ ಹೋರಾಟ ನಡೆಸುವುದು ಅನಿವಾರ್ಯ ಎಂದು ಹೇಳಿದರು.

> "ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸದಿದ್ದರೆ ಬೇಡಿಕೆಗಳ ಈಡೇರಿಕೆಗೆ ರೈತ ಹುತಾತ್ಮರ ಗ್ರಾಮ ಗೋವನಾಳದಿಂದ ಶಿಗ್ಲಿ ಮಾರ್ಗವಾಗಿ ಲಕ್ಷ್ಮೇಶ್ವರವರೆಗೆ ಪಾದಯಾತ್ರೆ ಹಮ್ಮಿಕೊಳ್ಳಲಾಗುವುದು."
> – ರೈತ ಮುಖಂಡರು

ಬಸವರಾಜ ಹಿರೇಮನಿ, ನೀಲಪ್ಪ ಶೇರಸೂರಿ ಹಾಗೂ ಹೊನ್ನಪ್ಪ ವಡ್ಡರ, ಟಾಕಪ್ಪ ಸಾತಪುತೆ ಮಾತನಾಡಿದರು.

ಸಭೆಯಲ್ಲಿ ನಾಮದೇವ ಮಾಂಡ್ರೆ, ಸಂಜೀವ ಹುಡೇದ, ಬಸವರಾಜ ಜಾಲಗಾರ, ಚಂದ್ರು ಮಾಗಡಿ, ಮಂಜುನಾಥ ಮುಳಗುಂದ, ಶಂಕರ ಬ್ಯಾಡಗಿ, ವೀರಣ್ಣ ಕಟಗಿ, ಪವನ ಬಂಕಾಪುರ, ಮುತ್ತಣ್ಣ ನೀರಲಗಿ, ಮಲ್ಲಿಕಾರ್ಜುನ ನೀರಾಲೋಟ, ರಾಜು ಗುಡಗೇರಿ, ಶಿವಪುತ್ರಪ್ಪ ತಾರಿಕೊಪ್ಪ, ಪದ್ಮನಗೌಡ ಪಾಟೀಲ, ಫಕ್ಕಿರಪ್ಪ ಕುಸಲಾಪುರ, ನಾಗನಗೌಡ ಪಾಟೀಲ, ಮಹಾಂತೇಶ ಉಮಚಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ತಯಬಅಲಿ ಹೊಂಬಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಎ1 ಹೈಟೆಕ್ ಕೋಚಿಂಗ್ ಕೇಂದ್ರ, ಗದಗ ಇವರ ಸಹಯೋಗದಲ್ಲಿ ನಡೆಯಲಿರುವ 3ನೇ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಹಿರಿಯ ಮಕ್ಕಳ ಸಾಹಿತಿ ತಯಬಅಲಿ ಎ. ಹೊಂಬಳ ಅವರನ್ನು ಆಯ್ಕೆ ಮಾಡಲಾಗಿದೆ.

ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ಕೊಡುಗೆ ನೀಡಿರುವ ತಯಬಅಲಿ ಹೊಂಬಳ ಅವರು ಮಕ್ಕಳ ಕಥೆ, ಕವನ, ಕಾದಂಬರಿಗಳನ್ನು ರಚಿಸುವ ಮೂಲಕ ಸಾಹಿತ್ಯ ಲೋಕದಲ್ಲಿ ವಿಶಿಷ್ಟ ಛಾಪು ಮೂಡಿಸಿದ್ದಾರೆ. ಇದುವರೆಗೆ 54ಕ್ಕೂ ಹೆಚ್ಚು ಕೃತಿಗಳನ್ನು ಸಾಹಿತ್ಯ ಕ್ಷೇತ್ರಕ್ಕೆ ಪರಿಚಯಿಸಿದ್ದಾರೆ.



ವೃತ್ತಿಯಿಂದ ಬೆರಳಚ್ಚು ಹಾಗೂ ಕಂಪ್ಯೂಟರ್ ಬೋಧಕರಾಗಿರುವ ಅವರು, ಪ್ರವೃತ್ತಿಯಿಂದ ಮಕ್ಕಳ ಸಾಹಿತ್ಯವನ್ನು ಮೈಗೂಡಿಸಿಕೊಂಡು ಸಾಹಿತ್ಯ ಸೇವೆ ಸಲ್ಲಿಸುತ್ತಿದ್ದಾರೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಹಿರಿಯ ಚಿಂತಕರಾದ ಕೆ.ಎಚ್. ಬೇಲೂರು, ಅನ್ನದಾನಿ ಹಿರೇಮಠ, ಡಾ. ದತ್ತಪ್ರಸನ್ನ ಪಾಟೀಲ, ಬಸವರಾಜ ನೆಲಜೇರಿ, ಗೌಡಪ್ಪ ಎಸ್. ಹುಲ್ಲೂರ, ಸತೀಶಕುಮಾರ ಚನ್ನಪ್ಪಗೌಡರ, ರಾಹುಲ್ ಗಿಡ್ನಂಡಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ತಯಬಅಲಿ ಹೊಂಬಳ ಅವರ ನಿವಾಸಕ್ಕೆ ತೆರಳಿ ಸಮ್ಮೇಳನಾಧ್ಯಕ್ಷತೆಯ ಆಹ್ವಾನ ನೀಡಿದರು.

### ಧರ್ತಿ ಮಾತಾ ಬಚಾವೋ ಅಭಿಯಾನ ಹಾಗೂ ಭೂ ಸಂಪನ್ಮೂಲ ಸಮೀಕ್ಷೆ ಸಾಕ್ಷರತಾ ಕಾರ್ಯಕ್ರಮಕ್ಕೆ ಚಾಲನೆ

# ಭೂಮಿ ಉಳಿವಿಗೆ ಸಾವಯವ ಕೃಷಿಯೇ ಪರಿಹಾರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೈತರು ಅತಿಯಾದ ರಾಸಾಯನಿಕ ಗೊಬ್ಬರ ಬಳಕೆಯಿಂದ ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತಿದ್ದು, ಸಾವಯವ ಹಾಗೂ ನೈಸರ್ಗಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಭೂಮಿ ತಾಯಿಯನ್ನು ರಕ್ಷಿಸಬೇಕು ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಹೇಳಿದರು.




ಸಮೀಪದ ಅಬ್ಬಿಗೇರಿ ಗ್ರಾಮದಲ್ಲಿ ಶುಕ್ರವಾರ ಕೃಷಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ "ಧರ್ತಿ ಮಾತಾ ಬಚಾವೋ ಅಭಿಯಾನ" ಕಾರ್ಯಕ್ರಮ ಹಾಗೂ ಭೂ ಸಂಪನ್ಮೂಲ ಸಮೀಕ್ಷೆ ಸಾಕ್ಷರತಾ ಅಭಿಯಾನದ ಅಂಗವಾಗಿ ನಡೆದ ಭೂ ಮಾತೆಯ ರಕ್ಷಣಾ ಕಣ್ಗಾವಲು ಸಭೆಯಲ್ಲಿ ಅವರು ಮಾತನಾಡಿದರು.

ಅತಿಯಾದ ಯೂರಿಯಾ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳನ್ನು ತಡೆಗಟ್ಟುವ ಉದ್ದೇಶದಿಂದ ಪ್ರತಿ ರೈತರಿಗೆ ಪ್ರತಿ ಎಕರೆಗೆ ಒಂದು ಚೀಲ ಯೂರಿಯಾ ಗೊಬ್ಬರವನ್ನು 'ಕೆ–ಕಿಸಾನ್ ಯೂರಿಯಾ' ತಂತ್ರಾಂಶದ ಮೂಲಕವೇ ವಿತರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕೃಷಿ ಇಲಾಖೆಯಿಂದ ದೊರೆಯುವ ಪಿಎಂಎಫ್‌ಎಂಇ ಯೋಜನೆಯ ಸದುಪಯೋಗವನ್ನು ಸಮರ್ಪಕವಾಗಿ ಪಡೆದುಕೊಳ್ಳಬೇಕು. ಕೃಷಿಹೊಂಡಗಳ ಸುತ್ತ ಸುರಕ್ಷಿತ ತಂತಿಬೇಲಿ ಅಳವಡಿಸಿಕೊಳ್ಳುವುದು ಕಡ್ಡಾಯವಾಗಿದೆ ಎಂದರು.

ಸಾವಯವ ಹಾಗೂ ನೈಸರ್ಗಿಕ ಕೃಷಿಗೆ ಪೂರಕವಾಗುವ ಕೃಷಿ ಪರಿಕರಗಳಾದ ಸೆಣಬಿನ ಬೀಜ, ರೈಜೋಬಿಯಂ, ಟ್ರೈಕೊಡರ್ಮಾ ಜೈವಿಕ ಪೀಡೆನಾಶಕಗಳನ್ನು ಇಲಾಖೆಯಿಂದ ರಿಯಾಯಿತಿ ದರದಲ್ಲಿ ಪಡೆದು ಬಳಸಿಕೊಳ್ಳಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಅಜಣ್ಣ ಶಿವಶಿಂಪರ, ಚಂದ್ರಶೇಖರಗೌಡ ಪಾಟೀಲ, ಬಿ.ಆರ್. ಪಾಲಾಕ್ಷಗೌಡ, ಎಸ್.ಎಫ್. ತಹಶೀಲ್ದಾರ, ಬಸವರಾಜ ಗದಗಿನ, ಬಸವರಾಜ ತಳವಾರ, ಹೆಚ್.ಟಿ. ದ್ಯಾಸಲ, ಮಲ್ಲಯ್ಯ ಶಿವಪೂಜೆ, ಬಾಬು ರಾಜೂರು, ಸಿದ್ದು ಸೋಲಗಿ, ಅನ್ನಪೂರ್ಣ, ಶಿಲ್ಪಾ ಕಟಗೇರಿ, ಬಸವರಾಜ ಹಡಪದ, ಬಸಮ್ಮ ತೆಗ್ಗಿನಕೇರಿ, ರಿವಾರ್ಡ್ ಯೋಜನೆಯ ಸಿಬ್ಬಂದಿ ಹಾಗೂ ಗ್ರಾಮದ ರೈತರು ಪಾಲ್ಗೊಂಡಿದ್ದರು.

# ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ 2025–26ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ವಿಶ್ವಕರ್ಮ ಸಮಾಜದ ವಿದ್ಯಾರ್ಥಿ– ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಮೇ 24ರಂದು ಭಾನುವಾರ ಬೆಳಿಗ್ಗೆ 9.30ಕ್ಕೆ ನಗರದ ವಿಶ್ವಕರ್ಮ ಭವನದಲ್ಲಿ ಪ್ರತಿಭಾ ಪುರಸ್ಕಾರ, ಕಲಿಕಾ ಸಾಮಗ್ರಿಗಳ ವಿತರಣೆ, ಸೇವಾ ನಿವೃತ್ತ ನೌಕರ ಸದಸ್ಯರ ಸನ್ಮಾನ, ಹಿರಿಯ ನಿವೃತ್ತ ಸದಸ್ಯರಿಗೆ ಗೌರವ, ವಿಶ್ವಕರ್ಮ ಭವನ ಹಾಗೂ ವಿದ್ಯಾರ್ಥಿ ವಸತಿ ನಿಲಯ ಕಟ್ಟಡಕ್ಕೆ ದೇಣಿಗೆ ನೀಡಿದ ಮಹಾದಾನಿಗಳ ಭಾವಚಿತ್ರ ಅನಾವರಣ ಮತ್ತು ರಾಜ್ಯದ ವಿವಿಧ ಜಿಲ್ಲೆಗಳ ವಿಶ್ವಕರ್ಮ ಸಮಾಜದ ನೌಕರ ಸಂಘಗಳ ಅಧ್ಯಕ್ಷರ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಹರಾಗಿದ್ದು, ಮೊದಲ ಮೂರು ಸ್ಥಾನ ಪಡೆದ ವಿದ್ಯಾಥಿ–ವಿದ್ಯಾರ್ಥಿನಿಯರಿಗೆ ವಿಶೇಷ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಉಳಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರದೊಂದಿಗೆ ಸನ್ಮಾನಿಸಿ ಗೌರವಿಸಲಾಗುವುದು ಎಂದು ತಿಳಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ದೃಢೀಕರಿಸಿದ ಅಂಕಪಟ್ಟಿ, ಆಧಾರ ಕಾರ್ಡ್ ಹಾಗೂ ಎರಡು ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರಗಳೊಂದಿಗೆ ಮೇ 18ರೊಳಗೆ ಸಂಘದ ಗೂಗಲ್ ಫಾರ್ಮ್, ಸಂಘದ ಕಾರ್ಯಾಲಯ, ತಾಲೂಕು ನಿರ್ದೇಶಕರು ಅಥವಾ ಆಯ್ಕೆ ಸಮಿತಿಯವರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಪಿಯುಸಿ ವಿಭಾಗಕ್ಕಾಗಿ ಕೆ.ಎಸ್. ಬಡಿಗೇರ (9482176166), ಆರ್.ಎಂ. ಬಡಿಗೇರ (9916765934), ವಿಜಯಕುಮಾರ ರಾಜನಾಳ (9341804366) ಹಾಗೂ ಎಸ್‌ಎಸ್‌ಎಲ್‌ಸಿ ವಿಭಾಗಕ್ಕಾಗಿ ಚಿದಾನಂದ ಎಂ. ಪತ್ತಾರ (9449187796), ಡಿ.ಎಸ್. ಬಡಿಗೇರ (9481523535), ಬಿ.ಎಂ. ಬಡಿಗೇರ (9482001657) ಸಂಪರ್ಕಿಸಬಹುದಾಗಿದೆ. ಎಂ.ಬಿ.ಬಿ.ಎಸ್, ಬಿ.ಎ.ಎಂ.ಎಸ್, ಬಿ.ವಿ.ಎಸ್, ಬಿ.ಡಿ.ಎಸ್, ಎನ್‌ಐಟಿ, ಐಐಟಿ, ಐಐಎಂಎಸ್, ಬಿ.ಎಸ್‌ಸಿ ನರ್ಸಿಂಗ್, ಬಿ.ಎಸ್‌ಸಿ ಅಗ್ರಿ ಹಾಗೂ ಬಿ.ಇ. ಸೇರಿದಂತೆ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕಾಗಿ ಡಾ. ಗಿರೀಶ ಬಡಿಗೇರ (9742842134) ಹಾಗೂ ವಿಜಯಕುಮಾರ ರಾಜನಾಳ (9341804366) ಇವರಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ ಹಾಗೂ ಪ್ರಧಾನ ಕಾರ್ಯದರ್ಶಿ ಡಾ. ಸಿ.ವಿ. ಬಡಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ನಿಲಯಕ್ಕೆ ಬಾಡಿಗೆ ಕಟ್ಟಡ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿಗೆ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಗಳಿಗಾಗಿ ಬಾಡಿಗೆ ಕಟ್ಟಡಗಳನ್ನು ಆಹ್ವಾನಿಸಲಾಗಿದೆ. 100 ವಿದ್ಯಾರ್ಥಿಗಳಿಗೆ ಅಗತ್ಯವಾಗುವಂತೆ ಎರಡು ವಸತಿ ನಿಲಯಗಳಿಗಾಗಿ ಸೂಕ್ತ ಕಟ್ಟಡಗಳು ಬೇಕಾಗಿವೆ.

ವಿದ್ಯಾರ್ಥಿಗಳಿಗೆ ಪ್ರತ್ಯೇಕ ಕೊಠಡಿಗಳು, ಸಮರ್ಪಕ ಶೌಚಾಲಯ ಹಾಗೂ ಸ್ನಾನಗೃಹ, ವಿಶಾಲವಾದ ಅಡುಗೆಮನೆ, ವಿದ್ಯುತ್ ಸೌಲಭ್ಯ ಮತ್ತು ಬೋರವೆಲ್ ವ್ಯವಸ್ಥೆ ಹೊಂದಿರುವ ಸುಸಜ್ಜಿತ ಕಟ್ಟಡಗಳಿಗೆ ಆದ್ಯತೆ ನೀಡಲಾಗುವುದು.

ಬಾಡಿಗೆಗೆ ಕಟ್ಟಡ ನೀಡಲು ಆಸಕ್ತಿ ಇರುವ ಮಾಲೀಕರು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ. ಕಚೇರಿ ಎದುರು, ಗದಗ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372–297258 ಅಥವಾ ಮೊಬೈಲ್ ಸಂಖ್ಯೆ 9480843128 ಸಂಪರ್ಕಿಸಬಹುದು.



ಇತ್ತೀಚಿಗೆ ಕಡಕೋಳದ ಬಸವ ಯೋಗಾಶ್ರಮ ರಾಜ್ಯ ಯೋಗ ಸಮ್ಮೇಳ ಮತ್ತು ಶರಣ ಸಂಸ್ಕೃತಿ ಅಂಗವಾಗಿ ನಡೆಸಿದ ರಾಜ್ಯಮಟ್ಟದ ಯೋಗ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಎಸ್.ವಾಯ್.ಬಿ.ಎಂ.ಎಸ್. ಯೋಗಾ ಪಾಠಶಾಲೆಯ ಮಹಿಳಾ ತಂಡ ಪೂಜ್ಯಶ್ರೀ ಬಸವಾನಂದ ಸ್ವಾಮಿಗಳಿಂದ ಬಹುಮಾನ ಸ್ವೀಕರಿಸಿದ ದೃಶ್ಯ. ತಂಡದಲ್ಲಿ ಸುನಂದಾ ಜ್ಯಾನೋಪಂತರ ಹಾಗೂ ಸಂಗಡಿಗರು ಮತ್ತು ಮಾರ್ಗದರ್ಶಕ ಕೆ. ಎಸ್. ಪಲ್ಲೇದ ಇರುವರು, ಅಭಿಮಾನಿಗಳು ಅಭಿನಂದನೆ ತಿಳಿಸಿರುವರು.

### ಶೇ. 85ಕ್ಕಿಂತ ಹೆಚ್ಚು ಅಂಕ ಪಡೆದ ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನ

# ಪ್ರತಿಭಾವಂತರನ್ನು ಸನ್ಮಾನಿಸುವುದು ಪುಣ್ಯದ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮಾಜದಲ್ಲಿನ ಪ್ರತಿಭಾವಂತರನ್ನು ಗುರುತಿಸಿ ಸನ್ಮಾನಿಸುವುದು ಪುಣ್ಯದ ಕೆಲಸವಾಗಿದ್ದು, ಅಂತಹ ಕಾರ್ಯದಲ್ಲಿ ಪಾಲ್ಗೊಳ್ಳುವವರು ಧನ್ಯರು ಎಂದು ಪ್ರಜಾಪಿತ ಬ್ರಹ್ಮಕುಮಾರಿಯ ಈಶ್ವರೀಯ ವಿಶ್ವವಿದ್ಯಾಲಯದ ವಿವಿಧ ಸಂಚಾಲಕಿ ಬ್ರ. ಕು. ಸವಿತಕ್ಕ ಹೇಳಿದರು.

ಪಟ್ಟಣದ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಗುರುವಾರ ಸಂಜೆ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು.



"ಪರೀಕ್ಷೆ ಒಂದು ಹಬ್ಬದಂತಿದ್ದು, ಅದನ್ನು ಸಮರ್ಥವಾಗಿ ಎದುರಿಸಿದ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಪಡೆದು ಪ್ರತಿಭಾವಂತರಾಗುತ್ತಾರೆ. ಅಂತಹ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವುದು ಶಿವನಿಗೆ ಪ್ರೀತಿಯ ಕೆಲಸವಾಗಿದೆ. ಈ ಉತ್ತಮ ಕಾರ್ಯಕ್ಕೆ ಸಹಕರಿಸಿದ ಎಲ್ಲರಿಗೂ ಈಶ್ವರೀಯ ಆಶೀರ್ವಾದ ದೊರಕುತ್ತದೆ" ಎಂದು ಹೇಳಿದರು.

ಎಸ್.ಎ. ಬಾಲಕರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಂ.ಬಿ. ಸಜ್ಜನ ಮಾತನಾಡಿ, ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವುದು ಉತ್ತಮ ಸಂಪ್ರದಾಯವಾಗಿದೆ. ಆದರೆ ಸಂಚಾಲಕಿ ಸವಿತಕ್ಕ ಅವರು ವಿಶೇಷ ಗಮನ ಹರಿಸಿ ಶೇ. 85ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಆಹ್ವಾನಿಸಿ ಗೌರವಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಇನ್ನಷ್ಟು ಉತ್ತಮ ಸಾಧನೆ ಮಾಡಿ ಇಲ್ಲಿ ಬಂದು ಸನ್ಮಾನ ಸ್ವೀಕರಿಸುವಂತಾಗಬೇಕು ಎಂದು ಆಶಿಸಿದರು.

ಶಿಕ್ಷಕ ಎಂ.ವಿ. ಬಿಂಗಿ ಹಾಗೂ ಉಪನ್ಯಾಸಕ ಶಿವಾನಂದ ಗೋಗೇರಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಶಿಕ್ಷಕ ಮಹಾದೇವಪ್ಪ ಬೇವಿನಕಟ್ಟಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯ 21 ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

# ಫಲವತ್ತಾದ ಭೂಮಿಗೆ ವಿಂಡ್‌ಪ್ಯಾನ್ ಕಂಟಕ?

▶▶ ಮೊದಲನೇ ಪುಟದಿಂದ

ಕರ್ನಾಟಕ ರೈತ ಸಂಘ–ಹಸಿರು ಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಬಸಯ್ಯ ಗುಡ್ಡಿಮಠ ಮಾತನಾಡಿ, "ಪಿತ್ರಾರ್ಜಿತವಾಗಿ ಉಳಿಸಿಕೊಂಡ ಭೂಮಿಯ ಬಹುಪಾಲು ವಿವಿಧ ಯೋಜನೆಗಳಿಗೆ ಬಲಿಯಾಗಿದೆ. ಈಗ ಉಳಿದ ಅಲ್ಪಸ್ವಲ್ಪ ಜಮೀನಿನಲ್ಲಿ ಕೃಷಿ ಮಾಡಿಕೊಂಡು ಬದುಕುತ್ತಿದ್ದೇವೆ. ಅದನ್ನೂ ವಿಂಡ್‌ಪ್ಯಾನ್ ಹೆಸರಿನಲ್ಲಿ ಹಾಳು ಮಾಡಲು ಹೊರಟಿದ್ದಾರೆ" ಎಂದು ಕಿಡಿಕಾರಿದರು.

ದಲಿತ ಸಂಘಟನೆಗಳ ಹಿರಿಯ ಮುಖಂಡ ಹಾಗೂ ಕರವೇ ಗೌರವಾಧ್ಯಕ್ಷ ಎಲ್. ನಾರಾಯಣಸ್ವಾಮಿ ಮಾತನಾಡಿ, ಈಗಾಗಲೇ ವಿವಿಧ ಭಾಗಗಳಲ್ಲಿ ಅಳವಡಿಸಿರುವ ವಿಂಡ್‌ಪ್ಯಾನ್‌ಗಳ ಕರ್ಕಶ ಶಬ್ದಗಳಿಂದ ಜಿಂಕೆ, ಸಾರಂಗ, ರಾಷ್ಟ್ರೀಯ ಪಕ್ಷಿ ನವಿಲು ಸೇರಿದಂತೆ ಸಾವಿರಾರು ಪ್ರಾಣಿ–ಪಕ್ಷಿಗಳು ನಾಗಸಮುದ್ರ, ನರಸಾಪೂರ, ಚಿಕ್ಕೊಪ್ಪ ಭಾಗಗಳಿಗೆ ವಲಸೆ ಬಂದಿವೆ ಎಂದು ಹೇಳಿದರು.

ಈ ಭಾಗದಲ್ಲಿಯೂ ವಿಂಡ್‌ಪ್ಯಾನ್ ಅಳವಡಿಸಿದರೆ ಪರಿಸರ ಸಂಪೂರ್ಣ ಹಾಳಾಗಲಿದ್ದು, ವನ್ಯಜೀವಿಗಳ ಬದುಕಿಗೆ ದೊಡ್ಡ ಹೊಡೆತ ಬೀಳಲಿದೆ. ಇದು ವನ್ಯಜೀವಿ ಸಂರಕ್ಷಣಾ ಕಾಯ್ದೆ–1972ಕ್ಕೂ ವಿರುದ್ಧವಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಎಸ್. ಮುಳ್ಳಾಳ, ಜಿಲ್ಲಾ ಸಂಚಾಲಕರಾದ ಸುರೇಶ ಮುಳಗುಂದ, ಪರಶುರಾಮ ಬನ್ನೂರ, ತಾಲೂಕು ಅಧ್ಯಕ್ಷ ಸಂತೋಷ ಕುಂಬಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅಧಿಕಾರಿಗಳಿಗೆ ಡಿಸಿ ಸೂಚನೆ: 53 ಟ್ಯಾಂಕರ್ ಸಿದ್ಧ- 50 ವಾರಗಳಿಗೆ ಸಾಕಾಗುವಷ್ಟು ಮೇವು ಲಭ್ಯ

# ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕಟ್ಟೆಚ್ಚರ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪ್ರಸ್ತುತ ಬೇಸಿಗೆ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಕ್ಕೆ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಸ್ನೇಹಲ್ ಆರ್. ಸೂಚಿಸಿದರು.

ಶುಕ್ರವಾರ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಗೂಗಲ್ ಮೀಟ್ ಮೂಲಕ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಮಲಪ್ರಭಾ ಬಲದಂಡೆ ಕಾಲುವೆ ಮೂಲಕ ಜಿಲ್ಲೆಯ ಕೆರೆಗಳಿಗೆ ಕುಡಿಯುವ ನೀರು ತುಂಬಿಸುವ ಕಾರ್ಯ ಪ್ರಗತಿಯಲ್ಲಿದ್ದು, ಕೃಷಿಯೇತರ ಚಟುವಟಿಕೆಗಳಿಗೆ ಕಾಲುವೆ ನೀರು ಬಳಸದಂತೆ ನೋಡಲ್ ಅಧಿಕಾರಿಗಳ ತಂಡ ನಿಗಾವಹಿಸುತ್ತಿದೆ ಎಂದು ತಿಳಿಸಿದರು.

ಗ್ರಾಮೀಣ ಭಾಗಗಳಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಕೊರತೆ ಉಂಟಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

**15 ಗ್ರಾಮಗಳಿಗೆ ಖಾಸಗಿ ಕೊಳವೆಬಾವಿ ಮೂಲಕ ನೀರು**

ಪ್ರಸ್ತುತ ಜಿಲ್ಲೆಯ 15 ಗ್ರಾಮಗಳಲ್ಲಿ 17 ಖಾಸಗಿ ಕೊಳವೆಬಾವಿಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಯಾವುದೇ ಗ್ರಾಮಕ್ಕೂ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವ ಪರಿಸ್ಥಿತಿ ನಿರ್ಮಾಣವಾಗಿಲ್ಲ ಎಂದು ಜಿಲ್ಲಾಧಿಕಾರಿ ತಿಳಿಸಿದರು.



ಬೇಸಿಗೆ ಪೂರ್ವ ಸಮೀಕ್ಷೆ ನಡೆಸಿ ನೀರಿನ ಕೊರತೆ ಉಂಟಾಗುವ ಸಾಧ್ಯತೆಯಿರುವ ಗ್ರಾಮಗಳನ್ನು ಗುರುತಿಸಲಾಗಿದ್ದು, ಅಗತ್ಯವಿದ್ದಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಕೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

**60 ಕೆರೆಗಳಿಗೆ ನೀರು ಭರ್ತಿ**

ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ ಹಾಗೂ ಕುಂದಗೋಳ ತಾಲೂಕುಗಳಲ್ಲಿ ನವಿಲುತೀರ್ಥ ಜಲಾಶಯದಿಂದ 60 ಕೆರೆಗಳಿಗೆ ನೀರು ತುಂಬಿಸಲಾಗಿದೆ. ಇದರಿಂದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

**ನಗರ ಪ್ರದೇಶದಲ್ಲಿ ನೀರಿನ ಸಮಸ್ಯೆ ಇಲ್ಲ**

ಧಾರವಾಡ ಜಿಲ್ಲೆಯ ಐದು ನಗರ ಸ್ಥಳೀಯ ಸಂಸ್ಥೆಗಳ 100 ವಾರ್ಡ್‌ಗಳಲ್ಲಿ ಯಾವುದೇ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿಲ್ಲ. 80 ವಾರ್ಡ್‌ಗಳಿಗೆ ಪ್ರತಿದಿನ ನೀರು ಸರಬರಾಜು ಮಾಡಲಾಗುತ್ತಿದ್ದು, ಉಳಿದ 20 ವಾರ್ಡ್‌ಗಳಿಗೆ 2 ರಿಂದ 3 ದಿನಗಳಿಗೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ನಗರ ಪ್ರದೇಶಗಳ ಕೆರೆಗಳಲ್ಲಿ ಸಾಕಷ್ಟು ನೀರಿನ ಸಂಗ್ರಹ ಇರುವುದರಿಂದ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದು ಅಂದಾಜಿಸಲಾಗಿದೆ ಎಂದರು.

**ಹುಬ್ಬಳ್ಳಿ-ಧಾರವಾಡದಲ್ಲಿ ಸಹಾಯವಾಣಿ ಆರಂಭ**

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ 82 ವಾರ್ಡ್‌ಗಳಲ್ಲಿ 13 ವಾರ್ಡ್‌ಗಳಿಗೆ 24ಥ7 ನೀರು ಪೂರೈಕೆ ಮಾಡಲಾಗುತ್ತಿದೆ. ಉಳಿದ ವಾರ್ಡ್‌ಗಳಿಗೆ 2 ರಿಂದ 7 ದಿನಗಳಿಗೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಹೇಳಿದರು.

ಕುಡಿಯುವ ನೀರಿನ ಸಮಸ್ಯೆಗಳಿಗೆ ಸಾರ್ವಜನಿಕರು ಸಂಪರ್ಕಿಸಲು 7996666247 ಸಹಾಯವಾಣಿ ಆರಂಭಿಸಲಾಗಿದ್ದು, 24 ಗಂಟೆ ಕಾರ್ಯನಿರ್ವಹಿಸಲು ಸಿಬ್ಬಂದಿ ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಗರಿಷ್ಠ ತಾಪಮಾನ 38.6 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

> "ಜಿಲ್ಲೆಯಲ್ಲಿ ಈಗಾಗಲೇ 53 ನೀರು ಪೂರೈಕೆ ಟ್ಯಾಂಕರ್‌ಗಳನ್ನು ಸಿದ್ಧವಾಗಿರಿಸಲಾಗಿದ್ದು, ಅಗತ್ಯ ಬಿದ್ದಲ್ಲಿ ಹೆಚ್ಚುವರಿ ಟ್ಯಾಂಕರ್ ವ್ಯವಸ್ಥೆಯನ್ನೂ ಮಾಡಲಾಗುವುದು. ಧಾರವಾಡ ಜಿಲ್ಲೆಯಲ್ಲಿ 5,16,834.81 ಟನ್ ಮೇವು ದಾಸ್ತಾನು ಲಭ್ಯವಿದ್ದು, ಸುಮಾರು 50 ವಾರಗಳಿಗೆ ಸಾಕಾಗುವಷ್ಟು ಮೇವು ಸಂಗ್ರಹ ಇರುವುದರಿಂದ ಜಾನುವಾರುಗಳಿಗೆ ಯಾವುದೇ ಮೇವಿನ ಕೊರತೆ ಉಂಟಾಗುವುದಿಲ್ಲ."
>
> **– ಸ್ನೇಹಲ್ ಆರ್. ಜಿಲ್ಲಾಧಿಕಾರಿ**

### ಸಾರ್ವಜನಿಕರಿಗೆ ಸಲಹೆಗಳು

- ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ನೀರು ಕುಡಿಯಿರಿ
- ಹಗುರ ಹಾಗೂ ತಿಳಿ ಬಣ್ಣದ ಬಟ್ಟೆ ಧರಿಸಿ
- ಬಿಸಿಲಿಗೆ ಹೋಗುವಾಗ ಟೋಪಿ, ಛತ್ರಿ, ಕನ್ನಡಕ ಬಳಸಿ
- ತೀವ್ರ ಬಿಸಿಲಿನಲ್ಲಿ ಶ್ರಮದಾಯಕ ಕೆಲಸ ತಪ್ಪಿಸಿ
- ಮಕ್ಕಳನ್ನು ಹಾಗೂ ಸಾಕುಪ್ರಾಣಿಗಳನ್ನು ವಾಹನಗಳಲ್ಲಿ ಬಿಡಬೇಡಿ ನಿಂಬೆಹಣ್ಣು ಪಾನಕ, ಮಜ್ಜಿಗೆ, ಓಆರ್‌ಎಸ್ ಸೇವಿಸಿ
- ಕಲ್ಲಂಗಡಿ, ಕರಬೂಜ, ದ್ರಾಕ್ಷಿ, ಸೌತೆಕಾಯಿ ಮೊದಲಾದ ನೀರಿನಾಂಶ ಹೆಚ್ಚಿರುವ ಹಣ್ಣು-ತರಕಾರಿಗಳನ್ನು ಸೇವಿಸಿ
- ಸಾಕುಪ್ರಾಣಿಗಳಿಗೆ ನೆರಳು ಹಾಗೂ ಸಾಕಷ್ಟು ನೀರು ಒದಗಿಸಿ

# ರೇಷನ್ ಕಾರ್ಡ್ ತಿದ್ದುಪಡಿ, ಸೇರ್ಪಡೆಗೆ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**



ಬಿಪಿಎಲ್, ಎಪಿಎಲ್ ಹಾಗೂ ಅಂತ್ಯೋದಯ ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳಿಗೆ ರೇಷನ್ ಕಾರ್ಡ್ ತಿದ್ದುಪಡಿ ಹಾಗೂ ಸದಸ್ಯರ ಸೇರ್ಪಡೆಗೆ ಸರ್ಕಾರ ಅವಕಾಶ ಕಲ್ಪಿಸಿದೆ ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2027ರ ಮಾರ್ಚ್ 31ರವರೆಗೆ ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಿಗೆ ಭೇಟಿ ನೀಡಿ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

ಸದಸ್ಯರ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬ ಮುಖ್ಯಸ್ಥರ ಬದಲಾವಣೆ, ಸದಸ್ಯರ ಫೋಟೋ ನವೀಕರಣ, ವಿಳಾಸ ಬದಲಾವಣೆ, ರೇಷನ್ ಅಂಗಡಿ ಬದಲಾವಣೆ ಹಾಗೂ ಹೆಸರು ಅಳಿಸುವಿಕೆ ಸೇರಿದಂತೆ ವಿವಿಧ ಸೇವೆಗಳಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಮದುವೆಯಾದ ಹೆಣ್ಣುಮಕ್ಕಳು ಹಾಗೂ ಮರಣ ಹೊಂದಿದ ಸದಸ್ಯರ ಹೆಸರನ್ನು ಮಾತ್ರ ರೇಷನ್ ಕಾರ್ಡ್‌ನಿಂದ ಅಳಿಸಲು ಅವಕಾಶವಿದೆ ಎಂದು ತಿಳಿಸಿದ್ದಾರೆ.

ಸರ್ಕಾರ ನೀಡಿರುವ ಈ ಸೌಲಭ್ಯವನ್ನು ಅರ್ಹ ಫಲಾನುಭವಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

# ನವೀನ ಬಡಿಗೇರಗೆ ಡಾಕ್ಟರೇಟ್ ಪದವಿ ಪ್ರದಾನ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**



ಬೆಂಗಳೂರಿನ SQI University ವತಿಯಿಂದ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಡಾ. ನವೀನ ಬಸವರಾಜ ಬಡಿಗೇರ ಅವರಿಗೆ "ಲಾ ಅಂಡ್ ಗ್ರೇಸ್" ವಿಷಯದಲ್ಲಿ ಫಿಲಾಸಫಿಕಲ್ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು. ವಿಶ್ವವಿದ್ಯಾಲಯದ ಅಧ್ಯಕ್ಷ ಡಾ. ರಮೇಶ್ ಬಾಲನ್ ಅವರು ಪದವಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಪಾ. ಸ್ಯಾಮ್, ಡಾ. ಗ್ರಾಸ್ ಹಾಗೂ ವಿಶ್ವವಿದ್ಯಾಲಯದ ಸಿಬ್ಬಂದಿ ಉಪಸ್ಥಿತರಿದ್ದರು.

ಹಾಲೇವಾಡಿಮಠದಲ್ಲಿ ಅದ್ದೂರಿ ಮೆರವಣಿಗೆ – ಮಹಿಳಾ ಡೊಳ್ಳು, ನಂದಿಕೋಲು ಕುಣಿತದ ವೈಭವ

# ಬಸವ-ರೇಣುಕಾಚಾರ್ಯ ಜಯಂತಿಯಲ್ಲಿ ಸಮಾನತೆಯ ಸಂದೇಶ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಐತಿಹಾಸಿಕ ಹಿನ್ನೆಲೆಯುಳ್ಳ ಹಾಲೇವಾಡಿಮಠದಲ್ಲಿ ಗುರುವಾರ ಬಾಳೆಹೊನ್ನೂರಿನ ರಂಭಾಪುರಿ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆ, ಧರ್ಮಸಭೆ, ಜಗದ್ಗುರು ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ ಹಾಗೂ ರೇಣುಕಾಚಾರ್ಯರ ಯುಗಮಾನೋತ್ಸವದ ಅಂಗವಾಗಿ ಜಗದ್ಗುರು ರೇಣುಕಾಚಾರ್ಯರು ಮತ್ತು ಜಗಜ್ಯೋತಿ ಬಸವಣ್ಣನವರ ಜಯಂತಿಯನ್ನು ಆಚರಿಸುವ ಮೂಲಕ ಸರ್ವಧರ್ಮ ಸಮನ್ವಯತೆಯ ಸಂದೇಶ ಸಾರಲಾಯಿತು.

ರೇಣುಕಾಚಾರ್ಯರು ಹಾಗೂ ಬಸವಣ್ಣನವರ ಭಾವಚಿತ್ರದ ಮೆರವಣಿಗೆ ಹಾಲೇವಾಡಿಮಠದಿಂದ ಆರಂಭಗೊಂಡು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಸಾಗರ ಹಾಗೂ ಕೊಣ್ಣೂರಿನ ಮಹಿಳಾ ಡೊಳ್ಳಿನ ಮೇಳ, ಗೊಜನೂರಿನ ನಂದಿಕೋಲು ಕುಣಿತದ ವಾದ್ಯಮೇಳ ಮೆರವಣಿಗೆಗೆ ವಿಶೇಷ ಮೆರುಗು ತಂದವು.

ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ ಹಾಗೂ ಜಿ.ಎಸ್. ಗಡ್ಡದೇವರಮಠ ಮೆರವಣಿಗೆಗೆ ಚಾಲನೆ ನೀಡಿದರು.

> "ರೇಣುಕಾಚಾರ್ಯರು ಹಾಗೂ ಬಸವಣ್ಣನವರು ಜಾತಿ-ಧರ್ಮ ಭೇದವಿಲ್ಲದೆ ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ಬಿತ್ತಿದ ಮಹನೀಯರು. ವಿಶ್ವಬಂಧುತ್ವದ ಸಂದೇಶ ಸಾರಿದ ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ."
>
> **– ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ಮಾಜಿ ಶಾಸಕ**

ಕಾರ್ಯಕ್ರಮದಲ್ಲಿ ಚಂಬಣ್ಣ ಬಾಳಿಕಾಯಿ, ಆನಂದ ಮೆಕ್ಕಿ, ನಿಂಗಪ್ಪ ಬನ್ನಿ, ನೀಲಪ್ಪ ಕರ್ಜೆಕಣ್ಣವರ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ಸಿ.ಆರ್. ಲಕ್ಕುಂಡಿಮಠ, ಬಸವರಾಜ ಮೆಣಸಿನಕಾಯಿ, ಶಿವಯೋಗಿ ಅಂಕಲಕೋಟಿ, ಚಂದ್ರು ಹಂಪಣ್ಣವರ, ಸೋಮಪ್ಪ ಅಣ್ಣಿಗೇರಿ, ಬಸವರಾಜ ಬೆಂಡಿಗೇರಿ, ಎಂ.ಕೆ. ಕಳ್ಳಿಮಠ, ಬಂಗಾರಪ್ಪ ಮುಳಗುಂದ, ರಾಜಶೇಖರ ಶಿಗ್ಲಿಮಠ, ಎಸ್.ಎಫ್. ಆದಿ, ಬಸವರಾಜ ಬಾಳಿಕಾಯಿ, ಪ್ರವೀಣ ಬಾಳಿಕಾಯಿ, ಮುದಕನಗೌಡ ಪಾಟೀಲ, ಮಹೇಶ ಹೊಗೆಸೊಪ್ಪಿನ, ಚಂದ್ರು ಹುರಕಡ್ಲಿ, ರಮೇಶ ಶಿರಬಡಗಿ, ಸುರೇಶ ಚೌಕನವರ, ಸಮೀರ ಪೂಜಾರ, ಈರಣ್ಣ ಮುಳಗುಂದ, ಡಾ. ಎಸ್.ಜಿ. ಹೂವಿನ, ನಂದೀಶ ಬಂಡಿವಾಡ ಸೇರಿದಂತೆ ಗಣ್ಯರು, ಹಿರಿಯರು, ಮಹಿಳೆಯರು ಹಾಗೂ ಭಕ್ತರು ಭಾಗವಹಿಸಿದ್ದರು.

ಕಸಾಪ 112ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಬಸವರಾಜ ಬಾಳೇಶ್ವರಮಠ

# ಕನ್ನಡ, ಕನ್ನಡಿಗ, ಕರ್ನಾಟಕದ ಏಳ್ಗೆಯೇ ಪರಿಷತ್ತಿನ ಧ್ಯೇಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ, ಕನ್ನಡಿಗ ಹಾಗೂ ಕರ್ನಾಟಕದ ಏಳ್ಗೆಗಾಗಿ ಪೂರಕ ಕಾರ್ಯಕ್ರಮಗಳು, ಹೋರಾಟಗಳು ಹಾಗೂ ಸಾಹಿತ್ಯ ಚಟುವಟಿಕೆಗಳನ್ನು ರೂಪಿಸಿಕೊಂಡು ಕನ್ನಡದ ಪ್ರಜ್ಞೆಯನ್ನು ಜೀವಂತವಾಗಿಡುವ ಕಾರ್ಯವನ್ನು ಕನ್ನಡ ಸಾಹಿತ್ಯ ಪರಿಷತ್ತು ಶತಮಾನದಿಂದ ಮಾಡುತ್ತಾ ಬಂದಿದೆ ಎಂದು ನ್ಯಾಯವಾದಿ ಹಾಗೂ ಸಾಹಿತಿ ಬಸವರಾಜ ಬಾಳೇಶ್ವರಮಠ ಹೇಳಿದರು.



ನಗರದ ಡಿ.ಜಿ. ಮೇಲ್ಮಾಳಗಿ ಆಯುರ್ವೇದ ಮಹಾವಿದ್ಯಾಲಯದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಆಯೋಜಿಸಿದ್ದ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ "ಸಾಹಿತ್ಯ ಮತ್ತು ಸಂಸ್ಕೃತಿ ಸಂವರ್ಧನೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ" ವಿಷಯವಾಗಿ ಅವರು ಮಾತನಾಡಿದರು.

ಕರ್ನಾಟಕ ಏಕೀಕರಣ ಹಾಗೂ ನಾಮಕರಣದ ಹೋರಾಟದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕನ್ನಡಿಗರು ಅಭಿಮಾನಶೂನ್ಯರಾಗದೇ ಭಾಷೆಯ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಿ.ಜಿ.ಎಂ. ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯ ಸಂತೋಷ ಬೆಳವಡಿ, ಕನ್ನಡಿಗರು ಸ್ವಾಭಿಮಾನ ಬೆಳೆಸಿಕೊಂಡು ಕನ್ನಡದ ಬೆಳವಣಿಗೆಗೆ ಶ್ರಮಿಸಬೇಕು. ಉನ್ನತ ಶಿಕ್ಷಣದ ಪಠ್ಯಗಳು ಕನ್ನಡದಲ್ಲೇ ದೊರೆಯುವಂತಾದರೆ ಬೇರೆ ಭಾಷೆಗಳ ಅನಿವಾರ್ಯತೆ ಕಡಿಮೆಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸಮ್ಮೇಳನ, ಪುಸ್ತಕ ಪ್ರಕಟಣೆ ಹಾಗೂ ಕಾರ್ಯಾಗಾರಗಳ ಮೂಲಕ ಕನ್ನಡಿಗರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಿದೆ ಎಂದರು.

ನಾಡು-ನುಡಿ, ನೆಲ-ಜಲದ ಪ್ರಶ್ನೆ ಬಂದಾಗ ಪರಿಷತ್ತು ಸದಾ ಮುಂಚೂಣಿಯಲ್ಲಿ ನಿಂತು ಕನ್ನಡಿಗರಿಗೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದೆ. ಕನ್ನಡಿಗರೆಲ್ಲರೂ ಪರಿಷತ್ತಿನ ಸದಸ್ಯರಾಗುವ ಮೂಲಕ ಸಂಘಟನೆಯ ಶಕ್ತಿಯನ್ನು ಇಮ್ಮಡಿಗೊಳಿಸಬೇಕು ಎಂದು ಕರೆ ನೀಡಿದರು.

ಕನ್ನಡ ಶಾಲೆಗಳ ಸಬಲೀಕರಣವೇ ಮೊದಲ ಆದ್ಯತೆಯಾಗಬೇಕು ಎಂದರು.

ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಶಿಕ್ಷಣ ಚಟುವಟಿಕೆಗಳು ಭಾಷೆಯನ್ನು ಸಮೃದ್ಧವಾಗಿ ಬೆಳೆಸುತ್ತವೆ. ಭಾಷಾ ಬೆಳವಣಿಗೆ ಮತ್ತು ಉದ್ಯೋಗದ ದೃಷ್ಟಿಯಿಂದ ತೋಂಟದ ಸಿದ್ಧಲಿಂಗ ಶ್ರೀಗಳು ಶಿಕ್ಷಣ ಸಂಸ್ಥೆಗಳನ್ನು ಆರಂಭಿಸಿದ್ದರು ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ ಎಸ್.ಎಸ್. ಪಟ್ಟಣಶೆಟ್ಟರ ಹಾಗೂ ಡಾ. ಬಸವರಾಜ ಧಾರವಾಡ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಿ.ಕೆ.ಎಚ್. ಶಾಸ್ತ್ರಿ, ಅನ್ನದಾನಿ ಹಿರೇಮಠ, ಡಿ.ಎಸ್. ಬಾಪುರಿ, ಅಮರೇಶ ರಾಂಪೂರ, ಸಿ.ಎಂ. ಮಾರನಬಸರಿ, ಪ್ರ.ತೋ. ನಾರಾಯಣಪೂರ, ಬಸವರಾಜ ವಾರಿ, ಸತೀಶ ಚನ್ನಪ್ಪಗೌಡ್ರ, ಬೂದಪ್ಪ ಅಂಗಡಿ, ಕು.ಶಿ. ಜಯದೇವಭಟ್, ಶಾರದಾ ಕಾತರಕಿ, ಮಲ್ಲಿಕಾರ್ಜುನ ನಿಂಗೋಜಿ, ಆನಂದ ಹಡಪದ, ಡಾ. ಬೂದೇಶ ಕನಾಜ ಹಾಗೂ ಮಹಾವಿದ್ಯಾಲಯದ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> "ಸರ್ಕಾರಿ ಶಾಲೆಗಳ ಸಬಲೀಕರಣ ಸರ್ಕಾರದ ಪ್ರಮುಖ ಆದ್ಯತೆಯಾಗಬೇಕು. ಕನ್ನಡ ಮಾಧ್ಯಮ ಶಾಲೆಗಳ ಕೊಡುಗೆ ಕನ್ನಡದ ಬೆಳವಣಿಗೆಗೆ ಅಪಾರವಾಗಿದೆ. ಜಿಲ್ಲೆಯಲ್ಲಿ ವಿವೇಕಾನಂದಗೌಡ ಪಾಟೀಲ ಅವರ ನೇತೃತ್ವದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನಿಂದ ನಡೆಯುತ್ತಿರುವ ಉತ್ತಮ ಕಾರ್ಯಗಳು ಸದಸ್ಯರಲ್ಲಿ ಸಂತಸ ಮೂಡಿಸಿವೆ."
>
> **– ಡಾ. ಬಸವರಾಜ ಧಾರವಾಡ, ಶಿಕ್ಷಣ ತಜ್ಞ**

ಧರ್ಮಾಚರಣೆ ಮೂಲಕ ಶಾಂತಿ, ನೆಮ್ಮದಿ ಸಾಧ್ಯ: ರಂಭಾಪುರಿ ಜಗದ್ಗುರು

# ಇಷ್ಟಲಿಂಗ ಪೂಜೆಯಿಂದ ಆತ್ಮಬಲ-ಮನೋಬಲ ವೃದ್ಧಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವೀರಶೈವ ಧರ್ಮ ಪರಂಪರೆಯಲ್ಲಿ ಇಷ್ಟಲಿಂಗ ಪೂಜೆಗೆ ಅತ್ಯಂತ ಶ್ರೇಷ್ಠ ಸ್ಥಾನವಿದ್ದು, ಇಷ್ಟಲಿಂಗಾರ್ಚನೆಯಿಂದ ಕಷ್ಟ-ನಷ್ಟ-ಅನಿಷ್ಟಗಳು ದೂರವಾಗಿ ಆತ್ಮಬಲ ಹಾಗೂ ಮನೋಬಲ ವೃದ್ಧಿಯಾಗಿ ಶಾಂತಿ ಮತ್ತು ನೆಮ್ಮದಿ ಪ್ರಾಪ್ತವಾಗುತ್ತದೆ ಎಂದು ಬಾಳೆಹೊನ್ನೂರು ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಪಟ್ಟಣದ ಐತಿಹಾಸಿಕ ಹಿನ್ನೆಲೆಯುಳ್ಳ ಲಕ್ಷಾಪತಿ ಹಾಲೇವಾಡಿಮಠದಲ್ಲಿನ ಜಗದ್ಗುರು ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ, ರೇಣುಕಾಚಾರ್ಯರ ಯುಗಮಾನೋತ್ಸವ, ಮಠದ ವಂಶಜರ ಸ್ಮರಣೆ ಹಾಗೂ ಗದ್ದುಗೆಗಳ ಅನಾವರಣ ಹಿನ್ನೆಲೆಯಲ್ಲಿ ಶ್ರೀಮಠದ ಆವರಣದಲ್ಲಿ ನಡೆದ ಇಷ್ಟಲಿಂಗ ಮಹಾಪೂಜೆಯಲ್ಲಿ ಆಶೀರ್ವಚನ ನೀಡಿದರು.

ಮನುಷ್ಯ ಜೀವನದಲ್ಲಿ ಪೂಜೆ, ಧ್ಯಾನ ಹಾಗೂ ಪ್ರಾರ್ಥನೆ ಅತ್ಯವಶ್ಯಕವಾಗಿದ್ದು, ವೀರಶೈವ ಲಿಂಗಾಯತರು ಇಷ್ಟಲಿಂಗ ಪೂಜೆಯನ್ನು ಜೀವನದಲ್ಲಿ ಅಳವಡಿಸಿಕೊಂಡು ಧರ್ಮ ಪರಂಪರೆಯನ್ನು ಕಾಪಾಡಬೇಕು ಎಂದು ಕರೆ ನೀಡಿದರು.



ಧರ್ಮ ಪಾಲನೆ, ಆಚರಣೆ ಹಾಗೂ ತತ್ವ-ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮಾನವೀಯ ನೆಲೆಗಟ್ಟಿನಲ್ಲಿ ಬದುಕಿದಾಗ ಮಾತ್ರ ನೆಮ್ಮದಿ ದೊರೆಯುತ್ತದೆ ಎಂದು ಹೇಳಿದರು.

ವೀರಶೈವ ಧರ್ಮದವರು ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ನೀಡಿ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು. ಸಿದ್ಧಾಂತ ಶಿಖಾಮಣಿ ಸೇರಿದಂತೆ ಧರ್ಮಗ್ರಂಥಗಳನ್ನು ಪ್ರತಿಯೊಬ್ಬರೂ ಅರಿತು ಇಷ್ಟಲಿಂಗ ಪೂಜೆ ಹಾಗೂ ಧರ್ಮಾಚರಣೆಗಳನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪಂಚಪೀಠಗಳು ಸಂಪತ್ತು, ಶಾಂತಿ, ತ್ಯಾಗ, ವೈರಾಗ್ಯ, ನಿರ್ಮಲತೆ ಹಾಗೂ ಜ್ಞಾನವನ್ನು ಪ್ರತಿನಿಧಿಸುತ್ತಿದ್ದು, ಸರ್ವಜನಾಂಗದ ಶ್ರೇಯೋಭಿವೃದ್ಧಿಯೇ ಗುರುಪೀಠಗಳ ಪರಮ ಧ್ಯೇಯವಾಗಿದೆ ಎಂದು ಜಗದ್ಗುರುಗಳು ಹೇಳಿದರು.

ಧರ್ಮಜಾಗೃತಿ ಹಾಗೂ ಸಮಾಜ ಕಲ್ಯಾಣ ಕಾರ್ಯಗಳಲ್ಲಿ ಹೆಸರಾದ ಹಾಲೇವಾಡಿಮಠದ ಪರಂಪರೆ ಶ್ರೇಷ್ಠವಾಗಿದೆ. ಶ್ರೀಮಠದ ಸೇವಾ ಕಾರ್ಯ ಶ್ಲಾಘನೀಯವಾಗಿದ್ದು, ಈ ಧರ್ಮ ಪರಂಪರೆಯನ್ನು ಮುಂದುವರೆಸುತ್ತಿರುವ ಶಿವಲಿಂಗಯ್ಯ ಹಾಲೇವಾಡಿಮಠ ಅವರಿಗೆ ರಂಭಾಪುರಿ ಪೀಠದಿಂದ ಗೌರವ ಪುರಸ್ಕಾರ ನೀಡಲಾಗುವುದು ಎಂದು ಘೋಷಿಸಿದರು.

ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆಯ ವೈಶಿಷ್ಟ್ಯ ಕಣ್ತುಂಬಿಕೊಳ್ಳಲು ಶ್ರೀಮಠದ ಆವರಣದಲ್ಲಿ ಭಕ್ತ ಸಮೂಹ ನೆರೆದಿತ್ತು.

ಈ ಸಂದರ್ಭದಲ್ಲಿ ಗಂಜಿಗಟ್ಟಿ ಶ್ರೀಗಳು, ಬನ್ನಿಕೊಪ್ಪ ಶ್ರೀಗಳು, ಸಿದ್ದರಬೆಟ್ಟ ಶ್ರೀಗಳು, ಮಳೇಮಲ್ಲಿಕಾರ್ಜುನ ಶ್ರೀಗಳು, ಲಕ್ಷಾಪತಿ ಹಾಲೇವಾಡಿಮಠದ ವಂಶಜರು, ಕಾರ್ಯಕ್ರಮದ ಸಂಘಟಕರು ಹಾಗೂ ಭಕ್ತರು ಉಪಸ್ಥಿತರಿದ್ದರು.

> "ಶಿವನಿಲ್ಲದ ಸ್ಥಾನವೇ ಇಲ್ಲ. ಪರಶಿವನ ಸಂಕೇತವಾದ ಇಷ್ಟಲಿಂಗಾರ್ಚನೆಯಿಂದ ಆತ್ಮೋದ್ಧಾರ ಸಾಧ್ಯ. ಇತ್ತೀಚಿನ ದಿನಗಳಲ್ಲಿ ಜನರು ಧರ್ಮದಿಂದ ವಿಮುಖರಾಗುತ್ತಿರುವುದರಿಂದ ಜೀವನದಲ್ಲಿ ಕಷ್ಟ-ನಷ್ಟಗಳು ಹೆಚ್ಚುತ್ತಿವೆ."
>
> **– ಡಾ. ವೀರಸೋಮೇಶ್ವರ ಜಗದ್ಗುರುಗಳು**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka